MAA ಫ್ರೆಂಡ್ಸ್ ಸಾರಥ್ಯದಲ್ಲಿ...

# ಯುವ ಮಾರ್ಗ

VOICE OF THE NATION

ಕನ್ನಡ ದಿನಪತ್ರಿಕೆ "ಇದು ರಾಷ್ಟ್ರದ ಧ್ವನಿ"

ಸಂಪಾದಕರು : ಅನಿಲ ಕುಮಾರ್ ಹೆಚ್
Cell : 9743497111

YUVA MARGA KANNADA DAILY NEWS PAPER

ಪ್ರಧಾನ ಸಂಪಾದಕರು : ಮನೋಜ ಮಿಶ್ರಾ
Cell : 9743496111

ಸಂಪುಟ: 04 | ಸಂಚಿಕೆ: 294 | ಮಂಗಳವಾರ :09-09-2025 | ರಾಯಚೂರು | RNI NO: KARKAN/2022/90446 | ಪುಟ: 4 | ಬೆಲೆ: ರೂ: 2-00

VOLUME: 04 | ISSUE: 294 | TUESDAY : 09-09-2025 | RAICHUR | EMAIL: YUVAMARGA@GMAIL.COM | PAGE: 4 | PRICE: Rs: 2-00

## ಮದ್ದೂರು ಪ್ರಕ್ಷುಬ್ಧ, ನಿಷೇಧಾಜ್ಞೆ



**ಮಂಡ್ಯ, ಸೆ. 8–** ಮದ್ದೂರಿನಲ್ಲಿ ನಿನ್ನೆ ರಾತ್ರಿ ನಡೆದ ಗಣಪತಿ ವಿಸರ್ಜನಾ ಮೆರವಣಿಗೆ ಮೇಲೆ ಕಲ್ಲು ತೂರಾಟ ನಡೆಸಿದ್ದ ಕಿಡಿಗೇಡಿಗಳನ್ನು ಬಂಧಿಸುವಂತೆ ಆಗ್ರಹಿಸಿ ಇಂದು ಬೆಳಗ್ಗೆ ಮಹಿಳೆಯರು-ಮಕ್ಕಳು ಸೇರಿದಂತೆ ನೂರಾರು ಮಂದಿ ಪ್ರತಿಭಟನೆ ನಡೆಸಿದ್ದು, ಪ್ರತಿಭಟನಾಕಾರರನ್ನು ಚದುರಿಸಲು ಪೊಲೀಸರು ಲಾಠಿ ಪ್ರಹಾರ ನಡೆಸಿದ್ದಾರೆ.ಇದರಿಂದ ಮದ್ದೂರಿನಲ್ಲಿ ಉದ್ವಿಗ್ನ ಪರಿಸ್ಥಿತಿ ರೂಪುಗೊಂಡಿದ್ದು, ಅಂಗಡಿ ಮುಂಗಟ್ಟುಗಳು ಬಂದ್ ಆಗಿ, ಒಂದು ರೀತಿ ಅಘೋಷಿತ ಬಂದ್ ವಾತಾವರಣ ಇದ್ದು, ಪರಿಸ್ಥಿತಿಯನ್ನು ನಿಯಂತ್ರಿಸಲು ಪೊಲೀಸರು ನಿಷೇಧಾಜ್ಞೆ ಜಾರಿ ಮಾಡದ್ದಾರೆ.

ನಿನ್ನೆ ಗಣೇಶ ಮೂರ್ತಿ ಮೇಲೆ ಕಲ್ಲೆಸೆದ ಅನ್ಯ ಕೋಮಿನವರನ್ನು ಬಂಧಿಸುವಂತೆ ಆಗ್ರಹಿಸಿ ಹಿಂದೂ ಕಾರ್ಯಕರ್ತರು ಇಂದು ಬೆಳಗ್ಗೆ ಮದ್ದೂರು ಪಟ್ಟಣದ ಮಸೀದಿ ಮುಂದೆ ಪ್ರತಿಭಟನೆ ನಡೆಸಿ ಕರ್ಪೂರ ಹಚ್ಚಿ, ಹಸಿರು ಬಾವುಟಗಳನ್ನು ಕಿತ್ತುಹಾಕಿ ಆಕ್ರೋಶ ವ್ಯಕ್ತಪಡಿಸಿದರು. ಹಾಗೆಯೇ ಗಣೇಶಮೂರ್ತಿ ಮೇಲೆ ಕಲ್ಲು ಎಸೆದ ಕಿಡಿಗೇಡಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಪಟ್ಟು ಹಿಡಿದು ಘೋಷಣೆಗಳನ್ನು ಕೂಗಿದರು.ಪರಿಸ್ಥಿತಿ ನಿಯಂತ್ರಣ ತಪ್ಪುತ್ತಿರುವುದನ್ನು ಅರಿತ ಪೊಲೀಸರು ತಕ್ಷಣ ಲಾಠಿಪ್ರಹಾರ ನಡೆಸಿ ಪ್ರತಿಭಟನಾಕಾರರನ್ನು ಚದುರಿಸಿದರು. ಈ ಪ್ರತಿಭಟನೆಯಲ್ಲ ಮಹಿಳೆಯರು ಮಕ್ಕಳು ಇದ್ದು, ಅವರಿಗೂ ಸಹ ಪೊಲೀಸರ ಲಾಠಿ ಬೀಸಿಯಿಂದ ಮುಟ್ಟಿಸಿದರು. ಸದ್ಯ ಮದ್ದೂರಿನಲ್ಲಿ ನಿಷೇಧಾಜ್ಞೆ ಜಾರಿ ಮಾಡಿ ಹೆಚ್ಚಿನ ಪೊಲೀಸ್ ಬಂದೋಬಸ್ತ್ ಜಾರಿ ಮಾಡಿ ಪರಿಸ್ಥಿತಿ ಪ್ರಕ್ಷುಬ್ಧಗೊಂಡಿದೆ. ಹೊರಗಡೆಯಿಂದ ಹೆಚ್ಚಿನ ಪೊಲೀಸ್ ಪಡೆಯನ್ನು ಕರೆಸಿ ಬಂದೋಬಸ್ತ್ ವ್ಯವಸ್ಥೆಯನ್ನು ಮಾಡಲಾಗಿದೆ. ಮದ್ದೂರು ಪಟ್ಟಣದ ರಾಮ್‌ರಹಿಂ ನಗರಕ್ಕೆ ಹೊಂದಿಕೊಂಡಿರುವ ಚನ್ನೇಗೌಡ ಬಪಡಾವಣೆಯಲ್ಲಿ ಗಣೇಶ ಮೂರ್ತಿಯನ್ನು ಪ್ರತಿಷ್ಠಾಪಿಸಲಾಗಿತ್ತು. ನಿನ್ನೆ ರಾತ್ರಿ ಗಣೇಶ ಮೂರ್ತಿಯ ವಿಸರ್ಜನಾ ಮೆರವಣಿಗೆ ವೇಳೆ ಅನ್ಯಕೋಮಿನ ಯುವಕರು ಕಲ್ಲು ತೂರಾಟ ನಡೆಸಿದ್ದರು. ಆಗ ಪೊಲೀಸರು ಲಾಠಿ ಪ್ರಹಾರ ನಡೆಸಿ ಎಲ್ಲರನ್ನು ಚದುರಿಸಿ ಪರಿಸ್ಥಿತಿಯನ್ನು ನಿಯಂತ್ರಿಸಿ ಗಣೇಶಮೂರ್ತಿ ವಿಸರ್ಜನೆಗೆ ಅವಕಾಶ ಮಾಡಿಕೊಟ್ಟಿದ್ದರು.

ಇಂದು ಬೆಳಗ್ಗೆ ಮಹಿಳೆಯರು ಮಕ್ಕಳು ಸೇರಿದಂತೆ ನೂರಾರು ಮಂದಿ ಹಿಂದೂಪರ ಕಾರ್ಯಕರ್ತರು ಗಣೇಶ ಮೂರ್ತಿ ಮೇಲೆ ಕಲ್ಲು ತೂರಿದ್ದವರನ್ನು ಬಂಧಿಸುವಂತೆ ಆಗ್ರಹಿಸಿ ಪ್ರತಿಭಟನಾ ಮೆರವಣಿಗೆ ನಡೆಸಿದ್ದರು. ಮೆರವಣಿಗೆ ಮದ್ದೂರು ಪಟ್ಟಣದ ಜಾಮೀಯಾ ಮಸೀದಿ ಬಳಿ ಬರುತ್ತಿದ್ದಂತೆಯೇ ಪ್ರತಿಭಟನಾನಿರತರು ರಸ್ತೆಯಲ್ಲೇ ಕರ್ಪೂರ ಹಚ್ಚಿ ಗಣೇಶ ಮೂರ್ತಿ ಮೇಲೆ ಕಲ್ಲು ತೂರಿದನ್ನು ಪ್ರತಿಭಟಿಸಿ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿ ಮಸೀದಿ ಮುಂದೆ ಡಿಜೆ ಹಾಕಿ ನೃತ್ಯ ಮಾಡಲು ಆರಂಭಿಸಿದರು.ಪೊಲೀಸರು ಮಸೀದಿ ಬಿಟ್ಟು ಮುಂದೆ ಹೋಗುವಂತೆ ಹೇಳಿದರೂ ಪ್ರತಿಭಟನಾಕಾರರು ಕಿಡಿಗೇಡಿಗಳನ್ನು ಬಂಧಿಸುವವರೆಗೂ ಜಾಗ ಬಿಟ್ಟು ಕದಲುವುದಿಲ್ಲ ಎಂದು ಪಟ್ಟು ಹಿಡಿದರು. ಇದರಿಂದ ಘರ್ಷಣೆಯ ವಾತಾವಣ

## ರಾಯಚೂರಿನ ವಿಜ್ಞಾನ ಕೇಂದ್ರದಲ್ಲಿ ಚಂದ್ರಗ್ರಹಣ ವೀಕ್ಷಣಾ ಮಹೋತ್ಸವ

ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.8–**ನಗರದ ವಿಜ್ಞಾನ ಕೇಂದ್ರದಲ್ಲಿ ಸೆ.7ರ ಸಂಜೆ ವೇಳೆಯಲ್ಲಿ ವಿದ್ಯಾರ್ಥಿ, ಯುವಜನರು, ನಾಗರಿಕರು ಒಳಗೊಂಡು ದೊಡ್ಡ ಸಂಖ್ಯೆಯಲ್ಲಿ ಸೇರಿದ್ದ ಜನರು ದೂರದರ್ಶಕಗಳ ಮೂಲಕ ಚಂದ್ರಗ್ರಹಣದ ವೀಕ್ಷಣೆ ನಡೆಸಿದರು.

ಮಹಾನಗರ ಪಾಲಿಕೆಯ ಆಯುಕ್ತ ಜುಬಿನ್ ಮೊಹಪಾತ್ರ ಅವರ ಮಾರ್ಗದರ್ಶನದಲ್ಲಿ ಈ ಕಾರ್ಯಕ್ರಮವನ್ನು ರಾಯಚೂರು ಮಹಾ ನಗರ ಪಾಲಿಕೆಯು ವಿಶೇಷವಾಗಿ ರೂಪಿಸಿತ್ತು. ವಿಜ್ಞಾನದ ವಿಶೇಷತೆ, ಜನಸಹಭಾಗಿತ್ವ ಮತ್ತು ನಾಗರಿಕ ಜಾಗೃತಿಯ ಪ್ರತೀಕವಾಗಿ ಕಾರ್ಯಕ್ರಮವು ಗಮನ ಸೆಳೆಯಿತು.




ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಯುವಜನ ಸೇವಾ ಹಾಗೂ ಕ್ರೀಡಾ ಇಲಾಖೆಗಳ ಸಹಯೋಗದಲ್ಲಿ ಈ ಕಾರ್ಯಕ್ರಮ ನಡೆಯಿತು.

ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಸಾರ್ವಜನಿಕರು ಅಪರೂಪದ ಖಗೋಳದ ಘಟನಾವಳಿ ವೀಕ್ಷಿಸಲು ಉತ್ಸಾಹದಿಂದ ಭಾಗವಹಿಸಿದ್ದರು.

ಕಾರ್ಯಕ್ರಮದಲ್ಲಿ 500ಕ್ಕೂ ಹೆಚ್ಚು ಜನರು ಸಕ್ರಿಯ ಭಾಗಿಯಾಗಿ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು.

ಇದೆ ವೇಳೆ, ವಿಜ್ಞಾನ ವಿಷಯದ ಶಿಕ್ಷಕರು, ತಜ್ಞರು ಚಂದ್ರಗ್ರಹಣದ ವೈಜ್ಞಾನಿಕ ಅಂಶಗಳನ್ನು ಸರಳವಾಗಿ ವಿವರಿಸಿದರು. ಹಲವಾರು ವಿದ್ಯಾರ್ಥಿಗಳು ಮೊದಲ ಬಾರಿಗೆ ದೂರದರ್ಶಕದ ಮೂಲಕ ಚಂದ್ರನ ಬದಲಾದ ಹಂತಗಳನ್ನು ವೀಕ್ಷಿಸಿ ಸಂತಷ ವ್ಯಕ್ತಪಡಿಸಿದರು.

ಮತ್ತಷ್ಟು ಕಾರ್ಯಕ್ರಮಕ್ಕೆ ಯೋಜನೆ: ಇದು ನಗರಕ್ಕಾಗಿ ಯುವಕರು-ಯುವಕರಿಗಾಗಿ ನಗರ ಅಭಿಯಾನದ 7ನೇ ಕಾ ರ್ಯಕ್ರಮವಾಗಿದೆ. ಕ್ರೀ ಡೆ, ಫಿಟ್ನೆಸ್, ಕಲೆ ಮತ್ತು ವಿಜ್ಞಾನ ಸೇರಿದಂತೆ ಹಲವು ರಚನಾತ್ಮಕ ಚಟು ವಟಿಕೆಗಳಲ್ಲಿ ಯುವ ಕ ರನ್ನುತೊಡಗಿಸಲು ಉದ್ದೇಶಿಸಲಾಗಿದೆ.



ಇದುವರೆಗೆ 3,500ಕ್ಕೂ ಹೆಚ್ಚು ಯುವಕರು ಈ ಅಭಿಯಾ ನದಲ್ಲಿ ಪಾಲ್ಗೊಂಡಿದ್ದು, ಮುಂದಿನ ಎರಡು ತಿಂಗಳು ಇನ್ನಷ್ಟು ಕಾರ್ಯಕ್ರಮಗಳೊಂದಿಗೆ ಇದು ಮುಂದುವರಿಯಲಿದೆ.

ಇಂತಹ ಕಾರ್ಯಕ್ರಮಗಳಿಂದ ಯುವಕರಲ್ಲಿ ವೈಜ್ಞಾನಿಕ ಚಿಂತನೆ ಬೆಳೆಸಲು ಸಹಾಯವಾಗುತ್ತದೆ. ಜೊತೆಗೆ ವಿಜ್ಞಾನ ಕೇಂದ್ರದ ವಿವಿಧ ಘಟಕಗಳ ಬಗ್ಗೆ ಜಾಗೃತಿ ಮೂಡಿಸಲು ಸಹ ನೆರವಾಗುತ್ತದೆ. ಸೆ.7ರ ಸಂಜೆ ವಿಜ್ಞಾನ ಕೇಂದ್ರದಲ್ಲಿ ನೆರೆದ ಜನರ ಆಸಕ್ತಿಯನ್ನು, ಅಲ್ಲಿನ ಚಟುವಟಿಕೆಗಳನ್ನು, ಗಮನಿಸಿದಾಗ, ಇಂತಹ ಖಗೋಳಶಾಸ್ತ್ರಕ್ಕೆ ಸಂಬಂಧಿಸಿದ ಪ್ರದರ್ಶನಗಳನ್ನು ಹಾಗೂ ಕಾರ್ಯಕ್ರಮಗಳನ್ನು ಹೆಚ್ಚಿನ ರೀತಿಯಲ್ಲಿ ನಡೆಸಬಹುದು ಎಂದೆನೆಸಿತು. ಅದರಂತೆ

ಮುಂದಿನ ದಿನಗಳಲ್ಲಿ ವಿಜ್ಞಾನ, ಖಗೋಳಶಾಸ್ತ್ರ ವಿಷಯಗಳಿಗೆ ಸಂಬಂಧಿಸಿದಂತೆ ಪಾಲಿಕೆಯಿಂದ ಕಾರ್ಯಕ್ರಮಗಳನ್ನು ವಿವಿಧ ಇಲಾಖೆಗಳ ಸಹಯೋಗದಲ್ಲಿ ಆಯೋಜಿಸುವುದಾಗಿ ಇದೆ ವೇಳೆ ಆಯುಕ್ತರಾದ ಜುಬಿನ್ ಮೊಹಪಾತ್ರ ಅವರು ತಿಳಿಸಿದರು.

## ಚುನಾವಣೆಯಲ್ಲಿ ಬ್ಯಾಲೆಟ್ ಪೇಪರ್, ಹಾಸ್ಯಾಸ್ಪದ : ಲೆಕ್ಕಿಹಾಳ

ಯುವ ಮಾರ್ಗ ಸುದ್ದಿ



**ಲಿಂಗಸುಗೂರು,ಸೆ.8–**ವಿಧಾನಸಭೆ ಚುನಾವಣೆಗೆ ಬಳಸದೇ ಇರುವ ಬ್ಯಾಲೆಟ್ ಪೇಪರ್ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಬಳಸಲು ತೀರ್ಮಾನಿಸಿರುವ ರಾಜ್ಯ ಸರಕಾರದ ಕ್ರಮ ಹಾಸ್ಯಾಸ್ಪದವಾಗಿದೆ. ರಾಹುಲ್‌ಗಾಂಧಿಯವರನ್ನು ಮೆಚ್ಚಿಸಲು ಸರಕಾರ ಇಂಥಹ ಕಾರ್ಯಕ್ಕೆ ಕೈ ಹಾಕಿದೆ ಎಂದು ಬಿಜೆಪಿ ಜಿಲ್ಲಾಧ್ಯಕ್ಷ ವೀರನಗೌಡ ಪಾಟೀಲ್ ಲೆಕ್ಕಿಹಾಳ ಹೇಳಿದರು.

ಪಟ್ಟಣದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಕೇಂದ್ರ ಸರ್ಕಾರ ಜಿಎಸ್‌ಟಿಯನ್ನು ಕಡಿಮೆ ಮಾಡುವ ಮೂಲಕ ಐತಿಹಾಸಿಕ ನಿರ್ಣಯ ಮಾಡಿದೆ. ಜನಸಾಮಾನ್ಯರು ಉಪಯೋಗಿಸುವ ವಸ್ತುಗಳ ಮೇಲಿರುವ ಜಿಎಸ್‌ಟಿಯನ್ನು ತೆಗೆದು ಹಾಕಿ ಕೇಂದ್ರ ಸರ್ಕಾರ ಜನಪರ ಸರ್ಕಾರ ಎನ್ನುವುದನ್ನು ರುಜುವಾತುಮಾಡಿದೆ. ಆದರೆ ರಾಜ್ಯದಲ್ಲಿ ಮಕ್ಕಳ ಆಹಾರದಿಂದ ಹಿಡಿದು ಪ್ರತಿಯೊಂದು ವಸ್ತುಗಳ ದರವನ್ನು ದುಪ್ಪಟ್ಟು ಮಾಡುವ ಮೂಲಕ ಬೆಲೆ ಏರಿಕೆ ಬರೆಯನ್ನು ಜನಸಾಮ್ಯಾನ ಮೇಲೆ ಹೊರಿಸಿರುವ ರಾಜ್ಯ ಸರಕಾರ, ಕೇವಲ ಗ್ಯಾರಂಟಿ ಯೋಜನೆಗಳನ್ನಿಟ್ಟುಕೊಂಡು ಗೆದ್ದಲು ಕೊರೆಯುವ ಕೆಲಸ ಮಾಡುತ್ತಿದೆ ಎಂದು ಆರೋಪಿಸಿದರು.

ರಾಜ್ಯದಲ್ಲಿ ಅತಿವೃಷ್ಟಿಯಿಂದ ರೈತರು ಹಾಗೂ ಸಾರ್ವಜನಿಕರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದಾರೆ. ಜಿಲ್ಲೆಯಲ್ಲಿ ಹತ್ತಿ, ತೊಗರಿ ಬೆಳೆಗಳು ಮಳೆಗೆ ನಾಶವಾಗಿವೆ. ಹಲವಾರು ಮನೆಗಳು ನೆಲಕಚ್ಚಿವೆ. ಜಿಲ್ಲೆಯ ಉಸ್ತುವಾರಿ ಸಚಿವರಂತು ಜಿಲ್ಲೆಯಲ್ಲಿ ಇಲ್ಲ. ಅವರು ಕಾಣೆಯಾಗಿದ್ದಾರೆ. ಕೂಡಲೇ ಬೆಳೆ ಸಮೀಕ್ಷೆ ಮಾಡಿ ನಷ್ಟಪರಿಹಾರವನ್ನು ಬಿಡುಗಡೆ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಬಿಜೆಪಿ ಮಂಡಲ ಅಧ್ಯಕ್ಷ ಕೆ.ನಾಗಭೂಷಣ, ಕಾರ್ಯದರ್ಶಿ ಮಂಜುನಾಥ ಪಾಟೀಲ್, ಮುಖಂಡರಾದ ಭೀಮಣ್ಣ ಹಿರೇಮನಿ, ಪರಶುರಾಮ ಕೆಂಭಾವಿ, ಜಗದೀಶ ಸಾಲಿಮಠ ಸೇರಿ ಇತರರು ಇದ್ದರು.

## ಲಂಡನ್‌ನಲ್ಲಿ ಬಸವಣ್ಣ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್

ಯುವ ಮಾರ್ಗ ಸುದ್ದಿ



**ರಾಯಚೂರು ಸೆ.8–**ಯುನೈಟೆಡ್ ಕಿಂಗ್‌ಡಮ್‌ನ ಲಂಡನ್ ನಗರದ ಥೇಮ್ಸ್ ನದಿಯ ದಂಡೆಯ ಮೇಲೆ ಸ್ಥಾಪಿಸಲಾಗಿರುವ ಸಾಮಾಜಿಕ ಕ್ರಾಂತಿಯ ಹರಿಕಾರ ಬಸವೇಶ್ವರರ ಪುತ್ಥಳಿಗೆ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಜೀವನೋಪಾಯ ಮತ್ತು ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಶರಣ ಪ್ರಕಾಶ್ ಆರ್. ಪಾಟೀಲ್ ಅವರು ಪುಷ್ಪನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು, ಬಸವ ತತ್ವದ ಮೇಲೆ ಅಪಾರ

## ಒಳ ಮೀಸಲಾತಿ ಜಾರಿಯಿಂದ ಶೋಷಿತ ಸಮುದಾಯಗಳಿಗೆ ಅನ್ಯಾಯ ಸೆ.10 ರಂದು ಬೆಂಗಳೂರಿನಲ್ಲಿ ಪ್ರತಿಭಟನೆ

ಯುವ ಮಾರ್ಗ ಸುದ್ದಿ




**ಅರಕೇರಾ,ಸೆ.8–**ರಾಜ್ಯ ಸರ್ಕಾರದ ಒಳ ಮೀಸಲಾತಿ ಜಾರಿ ನಿರ್ಧಾರದಲ್ಲಿ ಬಂಜಾರ, ಭೋವಿ, ಕೊರಚ, ಮತ್ತು ಕೊರವ ಸಮುದಾಯಗಳಿಗೆ ಅನ್ಯಾಯವಾಗಿದೆ ಎಂದು ರಾಷ್ಟ್ರೀಯ ಗೋರ ಸೇನಾ ಸಂಘಟನೆ ತಾಲ್ಲೂಕು ಕಾರ್ಯದರ್ಶಿ ಅಜಯ್ ಜಾದವ್ ಆಲ್ದರ್ತಿ ತಿಳಿಸಿದರು.

ಪಟ್ಟಣದ ಪ್ರತಿಕಾ ಭವನದಲ್ಲಿ ಸೋಮವಾರ ಕರೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು. ಸರ್ಕಾರವು ಶೋಷಿತ ಸಮುದಾಯಗಳಿಗೆ ಗಂಭೀರ ಅನ್ಯಾಯ ಮಾಡಿದೆ. ಸುಪ್ರೀಂ ಕೋರ್ಟ್ ತೀರ್ಪನ್ನು ಪರಿಗಣಿಸದೆ, ಅವೈಜ್ಞಾನಿಕ ತೀರ್ಮಾನ ಕೈಗೊಂಡಿದೆ, ಎಂದು ಆರೋಪಿಸಿದರು.

ಕಾಂಗ್ರೆಸ್ ಸರ್ಕಾರವು ಎಸ್‌ಸಿ ಪಟ್ಟಿಯಲ್ಲಿದ್ದ ಜಾತಿಗಳ ಸಂಖ್ಯೆಯನ್ನು 6ರಿಂದ 101ಕ್ಕೆ ಹೆಚ್ಚಿಸಿದ್ದರೂ, ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿಲ್ಲ. ಪರಿಶಿಷ್ಟ ಜಾತಿಯವರಿಗೆ ಒಳ ಮೀಸಲಾತಿ ನೀಡುವ ಸಂಬಂಧ ನಿವೃತ್ತ ನ್ಯಾಯಮೂರ್ತಿ ಎಚ್.ಎನ್.ನಾಗ ಮೋಹನ್ ದಾಸ್ ಆಯೋಗ ನೀಡಿರುವ ವರದಿ ಸಂಪೂರ್ಣ ಅವೈಜ್ಞಾನಿಕವಾಗಿದೆ. ಇದನ್ನು ಸಮುದಾಯ ತೀವ್ರವಾಗಿ ಕಂಡಿಸುತ್ತೇವೆ. ಆಯೋಗವು ಒಳ ಮೀಸಲಾತಿ ಹಂಚಿರುವುದು ಸುಪ್ರೀಂ ಕೋರ್ಟ್ ಆದೇಶಕ್ಕೆ ತದ್ವಿರುದ್ಧವಾಗಿದೆ. ರಾಜ್ಯ ಸರ್ಕಾರವು ಆರ್ಥಿಕವಾಗಿ ಸುಧಾರಣೆಯಾಗಿರುವ ಸಮುದಾಯಗ ಳಿಗೆ ಶೇ 6 ರಷ್ಟು ಒಳಮೀಸಲಾತಿ ನೀಡಿ, ತೀವ್ರವಾಗಿ ಹಿಂದುಳಿದ 63 ಸಮುದಾಯಕ್ಕೆ ಶೇ 5ರಷ್ಟು ಮೀಸಲಾತಿ ನೀಡಿ ಅನ್ಯಾಯ ಮಾಡಿದೆ ಎಂದು ಆರೋಪಿಸಿದರು. ಸೆಪ್ಟೆಂಬರ್ 10 ರಂದು ನಡೆಯಲಿರುವ ಈ ಪ್ರತಿಭಟನೆಯಲ್ಲಿ ರಾಜ್ಯದ ಮೂಲೆ ಮೂಲೆಗಳಿಂದ, ಲಂಬಾಣಿ ತಾಂಡಾ ಗಳಿಂದ ಸಾವಿರಾರು ಜನರು ಭಾಗವಹಿಸಲಿದ್ದಾರೆ. ಈ ಸರ್ಕಾರಕ್ಕೆ ಮುಂದಿನ ದಿನಮಾನದಲ್ಲಿ ತಕ್ಕ ಪಾಠ ಕಲಿಸುತ್ತೇವೆ ಎಂದು ಎಚ್ಚರಿಕೆ ನೀಡಿದರು. ಮುಖಂಡರಾದ ಜಯಪ್ಪ ರಾಠೋಡ್, ನಾಗರಾಜ ಪವಾರ್, ಬೂದೆಪ್ಪ ರಾಠೋಡ್, ವಿಶ್ವನಾಥ ಪವಾರ್, ಹುಲಿ ಚವ್ಹಾಣ್ ಸೇರಿದಂತೆ ಇತರರು ಇದ್ದರು.

## ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನವಾಗಲಿ: ಪಾಮಯ್ಯ ಮುರಾರಿ



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.8–**ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರ ಅಧ್ಯಕ್ಷತೆಯಲ್ಲಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದಿಂದ ವಿವಿಧ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯು ಸೆಪ್ಟೆಂಬರ್ 08ರಂದು ನಗರದ ಜಿಲ್ಲಾ ಪಂಚಾಯಿತಿಯ ಜಲ ನಿರ್ಮಲ ಸಭಾಂಗಣದಲ್ಲಿ ನಡೆಯಿತು.

ಗೃಹಲಕ್ಷ್ಮಿ, ಅನ್ನಭಾಗ್ಯ, ಶಕ್ತಿ, ಗೃಹಜ್ಯೋತಿ ಹಾಗೂ ಯುವನಿಧಿ ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನದ ಬಗ್ಗೆ ಪ್ರಾಧಿಕಾರದ ಅಧ್ಯಕ್ಷರು ಮತ್ತು ಎಲ್ಲ ಸದಸ್ಯರು ಸಮಗ್ರ ಪರಿಶೀಲಿಸಿದರು.

ಸಾರಿಗೆ ವ್ಯವಸ್ಥೆಯ ಬಗ್ಗೆ ಪರಿಶೀಲಿಸಿದ ಸದಸ್ಯರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರ ಬೇಡಿಕೆಗನುಸಾರ ಮಾರ್ಗಗಳ ಹೊಂದಾಣಿಕೆ ಮಾಡುವಂತೆ ಸೂಚಿಸಿದರು.

ಸಭೆಯಲ್ಲಿ, ಗೃಹಜ್ಯೋತಿ ಯೋಜನೆ ಪ್ರಗತಿ ಕುರಿತು ಚರ್ಚಿಸಲಾಯಿತು. ಜನತೆಗೆ ಈ ಯೋಜನೆಯ ಮಾಹಿತಿ ಕೊರತೆಯಿದ್ದು, ಜಾಗೃತಿ ಕಾರ್ಯಕ್ರಮ ನಡೆಸಲು ಅಧಿಕಾರಿಗಳಿಗೆ ಸೂಚಿಸಲಾಯಿತು.

ಗೃಹಲಕ್ಷ್ಮಿಯ ಎಲ್ಲ ಅರ್ಹ ಫಲಾನುಭವಿಗಳಿಗೆ ಕಾಲಕಾಲಕ್ಕೆ 2 ಸಾವಿರ ರೂ. ಜಮೆ ಮಾಡಬೇಕು. ತಾಂತ್ರಿಕ ತೊಂದರೆ ಕಂಡುಬಂದಲ್ಲಿ ಕೂಡಲೇ ಮೇಲದಿಕಾರಿಗಳ ಗಮನಕ್ಕೆ ತಂದು ಹಂತಹಂತವಾಗಿ ಸರಿಪಡಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.

ಯುವನಿಧಿ ಯೋಜನೆಗೆ ವಿದ್ಯಾರ್ಥಿಗಳ ನೋಂದಣಿಗಾಗಿ ಕಾಲೇಜು ಮತ್ತು ವಿಶ್ವವಿದ್ಯಾಲಯಗಳಲ್ಲಿ ಅಭಿಯಾನ ಕೈಗೊಂಡು ನೋಂದಣಿ ಮಾಡಲಾಗುತ್ತಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ನವೀನ್ ಕುಮಾರ ಅವರು ಸಭೆಗೆ ಮಾಹಿತಿ ನೀಡಿದರು.

ಸರ್ಕಾರ ಜಾರಿ ತಂದಿರುವ ಗ್ಯಾರಂಟಿ ಯೋಜನೆಗಳ ಸಮರ್ಪಕ ಅನುಷ್ಠಾನದಲ್ಲಿ ಸಮಿತಿಯ ಎಲ್ಲಾ ಸದಸ್ಯರ ಪಾತ್ರವು ಸಹ ಇದ್ದು ಯೋಜನೆಗಳ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಬೇಕು. ಈ ಯೋಜನೆಗಳ ಅನುಷ್ಠಾನದಿಂದ ಸಾರ್ವಜನಿಕರಿಗೆ ಅನುಕೂಲವಾದ ಯಶೋಗಾಥೆಗಳ ಬಗ್ಗೆ ತಿಳಿಸಬೇಕು ಎಂದು ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಪಾಮಯ್ಯ ಮುರಾರಿ ಅವರು ಸಲಹೆ ಮಾಡಿದರು.

ಗ್ಯಾರಂಟಿ ಶಿಬಿರ ನಡೆಸಲು ಸೂಚನೆ: ರಾಜ್ಯದ ಜನರನ್ನು **(2ನೇಪುಟಕ್ಕೆ)**

## ಮೊದಲನೇಯ ಪುಟದಿಂದ

# ಮದ್ದೂರು ಪ್ರಕ್ಷುಬ್ಧ, ನಿಷೇಧಾಜ್ಞೆ

ರೂಪುಗೊಂಡಿತು. ಪೊಲೀಸರು ತಕ್ಷಣ ಲಾಠಿ ಬೀಸಿ ಪ್ರತಿಭಟನಾಕಾರರನ್ನು ಚದುರಿಸಿದರು.ಇದರಿಂದ ಮದ್ದೂರಿನಲ್ಲಿ ಉದ್ವಿಗ್ನ ಪರಿಸ್ಥಿತಿ ಉಂಟಾಗಿದ್ದು, ನಿಷೇಧಾಜ್ಞೆಯನ್ನು ಜಾರಿ ಮಾಡಲಾಗಿದೆ. ಪೊಲೀಸ್ ಬಂದೋಬಸ್ತ್‌ನ್ನು ಬಿಗಿಗೊಳಿಸಿ ಹೆಚ್ಚುವರಿ ಪಡೆಗಳನ್ನು ಕರೆಸಿ ಪಟ್ಟಣದ ಸೂಕ್ಷ್ಮ ಮತ್ತು ಅತಿಸೂಕ್ಷ್ಮ ಪ್ರದೇಶದ ನಿಯೋಜಿಸಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಪೊಲೀಸರು ಮುಂಜಾಗ್ರತೆ ಕ್ರಮ ಕೈಗೊಂಡಿದ್ದು ನಾಳೆ ಬೆಳಗ್ಗೆವರೆಗೂ ನಿಷೇಧಾಜ್ಞೆಯನ್ನು ಜಾರಿ ಮಾಡಲಾಗಿದೆ. ಮದ್ದೂರಿನಲ್ಲಿ ಅಂಗಡಿ ಮುಂಗಟ್ಟುಗಳು ಬಂದ್ ಆ ಅಘೋಷಿತ ಬಂದ್ ವಾತಾವರಣ ರೂಪುಗೊಂಡಿದೆ. ಪೊಲೀಸರ ಗಸ್ತು ಹೆಚ್ಚಿಸಲಾಗಿದೆ. ನಿನ್ನೆ ರಾತ್ರಿ ಮೆರವಣಿಗೆ ವೇಳೆ ಕಲ್ಲು ತೂರಾಟದಿಂದ ಗಾಯಗೊಂಡಿರುವ ನಾಲ್ವರು ಹೋಂಗಾರ್ಡ್‌ಗಳು ಸೇರಿದಂತೆ 8 ಮಂದಿಯನ್ನು ಸ್ಥಳೀಯ ಆಸ್ಪತ್ರೆಗೆ ದಾಖಲಿಸಲಾಗಿದ್ದು ಎಲ್ಲರೂ ಪ್ರಾಣಾಪಾಯದಿಂದ ಪಾರಾಗಿದ್ದಾರೆ ಎನ್ನಲಾಗಿದೆ.

**ಭಾನುವಾರ ಘಟನೆ ವಿವರ :** ಚನ್ನೇಗೌಡ ಬಡಾವಣೆಯಲ್ಲಿ ರಾತ್ರಿ ಬೀದಿಯಲ್ಲಿ ಮೆರವಣಿಗೆ ಮೂಲಕ ಬಂದ ಗಣಪ ಮಸೀದಿ ಮುಂದೆ ಹಾದು ಹೋಗುತ್ತಿದ್ದಾಗ ಸ್ಥಳದಲ್ಲಿ ದಿಢೀರ್ ಲೈಟ್ ಆಫ್ ಮಾಡಿ ಮಸೀದಿಯಿಂದ ಕಲ್ಲು ತೂರಾಟ ನಡೆಸಿದ್ದಾರೆ. ಅಲ್ಲದೇ ದೊಣ್ಣೆಗಳನ್ನು ಕೂಡ ಎಸೆದಿದ್ದಾರೆ ಎಂದು ಸ್ಥಳದಲ್ಲಿದ್ದವರು ದೂರಿದ್ದಾರೆ.

ಮಸೀದಿ ಬಳಿ ಬಂದಾಗ ಯಾವುದೇ ಘೋಷಣೆ ಕೂಗಬಾರದು. ಮೈಕ್ ಹಾಕಬಾರದು ಎಂದು ಮೊದಲೇ ಎಚ್ಚರಿಕೆ ನೀಡಲಾಗಿತ್ತು. ಅದರಂತೆ ಮೈಕ್ ಆಫ್ ಮಾಡಿ ಮೆರವಣಿಗೆ ಮಾಡಲಾಗುತ್ತಿತ್ತು. ಇದಾದ ಬಳಿಕ ಏಕಾಏಕಿ ಲೈಟ್ ಆಫ್ ಮಾಡಿ ಗಣಪತಿ ಮೆರವಣಿಗೆ ಮೇಲೆ ಮಸೀದಿಯಿಂದ ಕಲ್ಲು ತೂರಾಟ ಮಾಡಲಾಗಿದೆ ಎಂದು ಹಿಂದೂಗಳು ಆರೋಪಿಸಿದ್ದಾರೆ.ಸ್ಥಳಕ್ಕೆ ಮಂಡ್ಯ ಎಸ್‌ಪಿ ಬಾಲದಂಡಿ ಭೇಟಿ ನೀಡಿ ಮಾಹಿತಿ ಪಡೆದು ಪಟ್ಟಣದಲ್ಲಿಯೇ ಮೊಕ್ಕಾಂ ಹೂಡಿ ಪರಿಸ್ಥಿತಿಯ ನಿಗಾ ವಹಿಸಿದ್ದಾರೆ.

**ಏಕಾಏಕಿ ಕಲ್ಲು ತೂರಾಟ:** ಘಟನೆ ಸಂಬಂಧ ಮಾಹಿತಿ ಎಸ್‌ಪಿ ಮಲ್ಲಿಕಾರ್ಜುನ ಬಾಲದಂಡಿ ಅವರು ತಮಿಳು ಕಾಲೋನಿ ಯುವಕರು ಗಣೇಶ ಪ್ರತಿಷ್ಠಾಪನೆ ಮಾಡಿದ್ದರು. ಗಣೇಶ ವಿಸರ್ಜನೆ ಮೆರವಣಿಗೆ ವೇಳೆ ರಾಮ್ ರಹೀಮ್ ನಗರದಲ್ಲಿ ಮೆರವಣಿಗೆ ವೇಳೆ ಕಲ್ಲು ತೂರಾಟ ನಡೆದಿದೆ.ಲೈಟ್ ಆಫ್ ಮಾಡಿ ಕಲ್ಲು ತೂರಾಟ ಮಾಡಿದ್ದಾರೆಂಬ ಆರೋಪವಿದೆ. ಘಟನೆ ಸಂಬಂಧ 2 ಪ್ರಕರಣ ದಾಖಲು ಮಾಡಿದ್ದೇವೆ. 21 ಆರೋಪಿಗಳನ್ನು ವಶಕ್ಕೆ ಪಡೆದಿದ್ದೇವೆ. ಇಬ್ಬರು ಮಾತ್ರ ಚನ್ನಪಟ್ಟಣದವರು, ಉಳಿದೆಲ್ಲರೂ ಸ್ಥಳೀಯರಾಗಿದ್ದಾರೆ,ನಾಳೆ ಬೆಳಗ್ಗೆವರೆಗೆ ಮದ್ದೂರಿನಲ್ಲಿ ನಿಷೇಧಾಜ್ಞೆ ಜಾರಿ ಮಾಡಿದ್ದು,ಪರಿಸ್ಥಿತಿ ಅವಲೋಕಿಸಿ ನಿಷೇದಾಜ್ಞೆ ಮುಂದುವರೆಸುವ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಎಸ್‌ಪಿ ಮಲ್ಲಿಕಾರ್ಜುನ ಬಾಲದಂಡಿ ಮಾಹಿತಿ ನೀಡಿದ್ದಾರೆ.

**ನಿಷೇಧಾಜ್ಞೆ ಜಾರಿ:**ಇಂದು ಮುಂಜಾನೆಯಿಂದ ಜಾರಿಗೊಳಿಸಿರುವ 144 ಸೆಕ್ಷನ್ ಅನ್ವಯ ನಿಷೇದಾಜ್ಞೆಯು ನಾಳೆ ಬೆಳಿಗ್ಗೆಯವರೆಗೆ ಜಾರಿ ಮಾಡಿ ಆದೇಶ ಹೊರಡಿಸಲಾಗಿದೆ.ಹೆಚ್ಚಿನ ಪೊಲೀಸರನ್ನು ನಿಯೋಜಿಸಿ ಸೂಕ್ಷ್ಮ ಅತಿ ಸೂಕ್ಷ್ಮ ಪ್ರದೇಶದಲ್ಲಿ ಕಟ್ಟೆಚ್ಚರ ವಹಿಸಲಾಗಿದೆ.ಎಸ್‌ಪಿ ಮಲ್ಲಿಕಾರ್ಜನ ಬಾಲದಂಡಿ ನೇತೃತ್ವದಲ್ಲಿ ಮದ್ದೂರು ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಪೊಲೀಸರು ಪಥಸಂಚಲನ ನಡೆಸಿದ್ದಾರೆ.ಕಳೆದ ವರ್ಷ ನಾಗಮಂಗಲದಲ್ಲಿ ಗಲಾಟೆ ಸಂಭವಿಸಿತ್ತು. ಇದೀಗ ಮತ್ತೊಂದು ಅದೇ ರೀತಿಯ ಘಟನೆ ಜಿಲ್ಲೆಯಲ್ಲಿ ಮರುಕಳಿಸಿದೆ.

# ಗ್ಯಾರಂಟಿ ಯೋಜನೆಗಳು ಸಮರ್ಪಕ ಅನುಷ್ಠಾನವಾಗಲಿ: ಪಾಮಯ್ಯ ಮುರಾರಿ

ಸಾಮಾಜಿಕವಾಗಿ ಸದೃಢಗೊಳಿಸಲು ಮತ್ತು ಆರ್ಥಿಕವಾಗಿ ಸಬಲೀಕರಣಗೊಳಿಸುವ ಸದುದ್ದೇಶದಿಂದ ರಾಜ್ಯ ಸರ್ಕಾರ ಜಾರಿ ತಂದಿರುವ ಗ್ಯಾರಂಟಿ ಯೋಜನೆಗಳನ್ನು ಮತ್ತಷ್ಟು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಸಂಬಂಧ ಜಾರಿ ಮಾಡಿದ ಗ್ಯಾರಂಟಿ ಯೋಜನೆಗಳ ಬಗ್ಗೆ ಜನರಿಗೆ ತಿಳಿವಳಿಕೆ ಮೂಡಿಸಲು ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಗ್ಯಾರಂಟಿ ಯೋಜನಗಳ ಶಿಬಿರ ಕಾರ್ಯಕ್ರಮ ಏರ್ಪಡಿಸಿ ಫಲಾನುಭವಿಗಳೊಂದಿಗೆ ಮುಕ್ತ ಸಂವಾದ ನಡೆಸಬೇಕು. ಯೋಜನೆಗಳ ಪ್ರಯೋಜನೆ ಪಡೆಯುವಲ್ಲಿ ಏನಾದರು ತೊಂದರೆಗಳಿದ್ದಲ್ಲಿ ತಕ್ಷಣ ಸ್ಪಂದಿಸುವ ಕುರಿತು ಚರ್ಚೆ ನಡೆಸಲು ಕ್ರಮವಹಿಸಬೇಕು ಎಂದು ಪಾಮಯ್ಯ ಮುರಾರಿ ಅವರು ಸಲಹೆ ಮಾಡಿದರು.

ಯೋಜನೆಗಳ ಪ್ರಗತಿ: 2025ರ ಫೆಬ್ರವರಿ ಮಾಹೆಯಿಂದ ಜಿಲ್ಲೆಯ ಪಡಿತರ ಚೀಟಿದಾರರಿಗೆ ಹಣದ ಬದಲು ಹೆಚ್ಚುವರಿಯಾಗಿ 5 ಕೆಜಿ ಅಕ್ಕಿಯನ್ನು ವಿತರಣೆ ಮಾಡಲಾಗುತ್ತಿದೆ. ಗೃಹಲಕ್ಷ್ಮೀ ಯೋಜನೆಯಡಿ 2025ರ ಜೂನ್ ತಿಂಗಳವರೆಗೆ 4,46,138 ಫಲಾನುಭವಿಗಳು ನೋಂದಾಯಿಸಿಕೊಂಡಿದ್ದಾರೆ. ಗೃಹಜ್ಯೋತಿ ಯೋಜನೆಯಡಿ ಜಿಲ್ಲೆಯಲ್ಲಿ 3,42,276 ಫಲಾನುಭವಿಗಳಿಗೆ 335.11 ಕೋಟಿ ರೂ. ವೆಚ್ಚ ಭರಿಸಲಾಗಿದೆ. ಶಕ್ತಿ ಯೋಜನೆಯಡಿ ಇದುವರೆಗೆ 379.00 ಕೋಟಿ ರೂ. ವೆಚ್ಚ ಭರಿಸಲಾಗಿದೆ. ಯುವನಿಧಿ ಯೋಜನೆಯಡಿ ಜಿಲ್ಲೆಯಾದ್ಯಂತ ಒಟ್ಟು 1,20,455 ಪದವಿ ಹಾಗೂ 1083 ಡಿಪ್ಲೋಮಾ ಪೂರ್ಣಗೊಳಿಸಿದ ನೋಂದಾಯಿತ ಫಲಾನುಭವಿಗಳು ಯೋಜನೆಯ ಲಾಭ ಪಡೆಯುತ್ತಿದ್ದಾರೆ ಎಂದು ಆಯಾ ಇಲಾಖೆಗಳ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಪ್ರಾಧಿಕಾರದ ಜಿಲ್ಲಾಮಟ್ಟದ ಉಪಾಧ್ಯಕ್ಷರಾದ ನಾಗೇಂದ್ರ, ಗಫೂರ್ ಸಾಬ್, ಹನುಮಂತ ಜಾಲಿಬೇಂಚಿ, ಶೇಖರ್ ಗೌಡ ತುರುವಿಹಾಳ, ಸದಸ್ಯರಾದ ಎಚ್.ಪಿ ಬಸವರಾಜ ಬಿ, ಕೆ.ಅಮರೇಶ, ಪವನ ಪಾಟೀಲ್, ಲಕ್ಷ್ಮಣ ಜ್ಯೋತಿ, ಮಹೆಬೂಬ್ ಸಾಬ್, ವೆಂಕಟರಾವ್, ಜಾಫರ್ ಅಲಿ, ವೆಂಕಟೇಶ್, ಎಚ್.ಬಸವರಾಜ ಗೋನವಾರ, ಶೇಖರಪ್ಪ ಯಾದವ್, ನಜೀರ ಪಂಜಾಬಿ, ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕರಾದ ಡಾ.ಟಿ.ರೋಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರಾದ ನವೀನ್ ಕುಮಾರ್, ಜಿಲ್ಲಾ ಅಗ್ರಗಣ್ಯ ಬ್ಯಾಂಕ್ ಮುಖ್ಯಸ್ಥರಾದ ಪಾಂಡಪ್ಪ ಲಂಬಾಣಿ, ಜೆಸ್ಕಾಂ ಇಲಾಖೆಯ ಚಂದ್ರಶೇಖರ ದೇಸಾಯಿ, ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಪ್ರಭಾರಿ ಉಪ ನಿರ್ದೇಶಕರಾದ ನಜೀರ್ ಅಹಮದ್, ಜಿಲ್ಲಾ ಉದ್ಯೋಗಾಧಿಕಾರಿಗಳಾದ ನವೀನಕುಮಾರ್ ಸಂಗೇಪಾಗ್, ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಚಂದ್ರಶೇಖರ ಎಂ.ಎಸ್ ಸೇರಿದಂತೆ ತಾಲೂಕು ಪಂಚಾಯತ್ ಇಒಗಳು, ವಿವಿಧ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿ ಇದ್ದರು.

# ಲಂಡನ್‌ನಲ್ಲಿ ಬಸವಣ್ಣ ಪುತ್ಥಳಿಗೆ ಪುಷ್ಪನಮನ ಸಲ್ಲಿಸಿದ ಸಚಿವರಾದ ಡಾ.ಶರಣಪ್ರಕಾಶ್ ಪಾಟೀಲ್

ನಂಬಿಕೆ ಇಟ್ಟಿರುವ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿಗಳಿಗೂ ಆಹ್ವಾನ ನೀಡಲಾಗಿದೆ ಎಂದು ತಿಳಿಸಿದರು.

ಕರ್ನಾಟಕದಲ್ಲಿ ಕ್ರಾಂತಿ ಮಾಡಿರುವ ನಮ್ಮ ಬಸವಣ್ಣನವರ ಪ್ರತಿಮೆ ಅನಾವರಣದ ದಶಮಾನೋತ್ಸವ ಸಮಾರಂಭದಲ್ಲಿ ಭಾಗಿಯಾಗಲು ಮಾಡಿರುವ ಮನವಿ ನೀಡುತ್ತೇನೆ ಎಂದು ತಿಳಿಸಿದರು.ಬಸವೇಶ್ವರರ ವಚನಗಳು ಇಂದಿನ ಕಾಲಘಟ್ಟದಲ್ಲಿಯೂ ಅತಿ ಪ್ರಸ್ತುತವಾಗಿದ್ದು, ನ್ಯಾಯಸಮ್ಮತ ಮತ್ತು ಸಮಾನತೆಯನ್ನು ಒಳಗೊಂಡ ಸಮಾಜವನ್ನು ನಿರ್ಮಿಸಲು ಮಾರ್ಗದರ್ಶಕವಾಗಿವೆ ಎಂದು ಸಚಿವರು ಹೇಳಿದರು. ಈ ಬಸವೇಶ್ವರರ ಪ್ರತಿಮೆಯನ್ನು 2015ರ ನವೆಂಬರ್ 14ರಂದು ಭಾರತದ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಅನಾವರಣಗೊಳಿಸಿದ್ದರು.ಈ ಸಂದರ್ಭದಲ್ಲಿ ಉನ್ನತ ಶಿಕ್ಷಣ ಸಚಿವರಾದ ಡಾ. ಎಂ. ಸಿ. ಸುಧಾಕರ್, ವಿಧಾನ ಪರಿಷತ್ ಸದಸ್ಯರಾದ ಮಂಜುನಾಥ್ ಭಂಡಾರಿ ಹಾಗೂ ಸ್ಥಳೀಯ ಕನ್ನಡಿಗರು ಹಾಜರಿದ್ದರು.

# ಸೋಲು–ಗೆಲುವು ಕ್ರೀಡೆಯಲ್ಲಿ ಸಹಜ; ಸೋತವರು ಧೃತಿಗೆಡದೆ ಪ್ರಯತ್ನಿಸಬೇಕು: ಶಾಸಕ ಜಿ. ಹಂಪಯ್ಯ ನಾಯಕ್ ಸಲಹೆ



**ಯುವ ಮಾರ್ಗ ಸುದ್ದಿ**

**ಸಿರವಾರ,ಸೆ.8–** ತಾಲೂಕಿನ ಮಲಟ್ ಗ್ರಾಮದಲ್ಲಿರುವ ಕಿತ್ತೂರಾಣಿ ಚೆನ್ನಮ್ಮ ವಸತಿ ನಿಲಯದ ಆವರಣದಲ್ಲಿ, ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಮಾನ್ವಿ ಶಾಸಕರಾದ ಜಿ. ಹಂಪಯ್ಯ ನಾಯಕ್ ಸಾಹುಕಾರ್ ಅವರು ಇಂದು ಚಾಲನೆ ನೀಡಿದರು.ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದ ಶಾಸಕರು, ಕ್ರೀಡೆಯಲ್ಲಿ ಸೋಲು–ಗೆಲುವು ಸಹಜ. ಆದರೆ, ಮಕ್ಕಳು ಸೋತಿದ್ದೇವೆ ಎಂಬ ಕಾರಣಕ್ಕೆ ಧೃತಿಗೆಡಬಾರದು. ಸೋತ ಮರುದಿನದಿಂದಲೇ ಮುಂದಿನ ಗೆಲುವಿಗಾಗಿ ಪ್ರಾಮಾಣಿಕ ಪ್ರಯತ್ನ ಮಾಡಿದಾಗ ಮಾತ್ರ ಜೀವನದಲ್ಲಿ ಯಶಸ್ಸು ಸಾಧಿಸಲು ಸಾಧ್ಯ ಎಂದು ಸಲಹೆ ನೀಡಿದರು.

ಈ ಕ್ರೀಡಾಕೂಟದಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳು ತಮ್ಮ ಕ್ರೀಡಾ ಪ್ರತಿಭೆಯನ್ನು ಜಿಲ್ಲಾ ಮತ್ತು ರಾಜ್ಯಮಟ್ಟದಲ್ಲಿ ಪ್ರದರ್ಶಿಸಿ, ನಮ್ಮ ತಾಲೂಕಿಗೆ ಕೀರ್ತಿ ತರಲಿ ಎಂದು ಶುಭ ಹಾರೈಸಿದರು.ಈ ಸಂದರ್ಭದಲ್ಲಿ ಸಿರವಾರ ಪಟ್ಟಣ ಪಂಚಾಯಿತಿ ಅಧ್ಯಕ್ಷ ವೈ. ಭೂಪನ ಗೌಡ, ಉಪಾಧ್ಯಕ್ಷೆ ಲಕ್ಷ್ಮಿ ಆದೇಪ್ಪ, ನವಲಕಲ್ ಗ್ರಾಪಂ ಅಧ್ಯಕ್ಷೆ ದೇವಮ್ಮ, ಗಂ. ದೇವಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ ದೊಡ್ಡಮನಿ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಆರೀಫ್ ಮಿಯಾ, ದೈಹಿಕ ಶಿಕ್ಷಕರು, ಶಿಕ್ಷಣ ಇಲಾಖೆಯ ಪದಾಧಿಕಾರಿಗಳು ಹಾಗೂ ವಿವಿಧ ಶಾಲಾ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಆದಿ ಕರ್ಮಯೋಗಿ ಅಭಿಯಾನ ತರಬೇತಿ ಕಾರ್ಯಾಗಾರ ರಾಯಚೂರ ಜಿಲ್ಲೆಯಲ್ಲಿ ಯಶಸ್ವಿ



**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.8–**ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವಾಲಯದ ರಾಷ್ಟ್ರಮಟ್ಟದಲ್ಲಿನ ಆದಿಕರ್ಮಯೋಗಿ ಕಾರ್ಯಕ್ರಮಕ್ಕೆ ಸಂಬಂಧಿಸಿದಂತೆ ಆದಿ ಕರ್ಮಯೋಗಿ ಅಭಿಯಾನ ತರಬೇತಿ ಕಾರ್ಯಾಗಾರವು ರಾಯಚೂರಿನಲ್ಲಿ ಇತ್ತೀಚೆಗೆ ಯಶಸ್ವಿಯಾಗಿ ನಡೆಯಿತು.

ರಾಯಚೂರಿನ ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಸಿಲ್ವರ್ ಜುಬ್ಲಿ ಸೆಮಿನಾರ್ ಹಾಲ್‌ನಲ್ಲಿ ಇತ್ತೀಚೆಗೆ ನಡೆದ ಕಾರ್ಯಗಾರಕ್ಕೆ ಜಿಲ್ಲಾ ಪಂಚಾಯತ್‌ನ ಮುಖ್ಯ ಯೋಜನಾಧಿಕಾರಿ ಡಾ.ಟಿ ರೋಣಿ ಅವರು ಜ್ಯೋತಿ ಬೆಳಗಿಸಿ ಉದ್ಘಾಟಿಸಿದರು.

ಈ ವೇಳೆ ಮಾತನಾಡಿದ ಡಾ.ಟಿ ರೋಣಿ ಅವರು, ಮಾನ್ಯ ಪ್ರಧಾನಮಂತ್ರಿಯವರ ದೂರದೃಷ್ಟಿಯ ಯೋಜನೆಯಾದ ಧರ್ತಿ ಅಭಾ ಜನಜಾತಿಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಯಡಿ ಮೊದಲ ಹಂತವಾಗಿ ತೆಗೆದುಕೊಂಡಿರುವ ಏಳು ಇಲಾಖೆಗಳು ಪರಿಶಿಷ್ಟ ಪಂಗಡದ ಜನಾಂಗದವರಿಗೆ ಮಹತ್ವಪೂರ್ಣವಾಗಿದೆ ಎಂದರು. ಇಲಾಖೆಯಿಂದ ತರಬೇತಿಗೆ ಆಗಮಿಸಿದವರು ತರಬೇತಿಯಲ್ಲಿ ನೀಡುವ ಸಲಹೆ ಸೂಚನೆಗಳನ್ನು ಅನುಸರಿಸಿ ಅಭಿಯಾನದ ಉದ್ದೇಶ ಮತ್ತು ಮಹತ್ವ ಅರಿಯಬೇಕು. ಕಟ್ಟಕಡೆಯ ವ್ಯಕ್ತಿಗಳಿಗೆ ಯೋಜನೆಯ ಪ್ರಯೋಜನೆ ತಲುಪಿಸಲು ಪ್ರಾಮಾಣಿಕ ಪ್ರಯತ್ನ ಮಾಡಲು ಶ್ರಮಸಬೇಕು ಎಂದು ತಿಳಿಸಿದರು.

ಕಾರ್ಯಕ್ರಮದ ನೋಡಲ್ ಅಧಿಕಾರಿಗಳು ಆಗಿರುವ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ಶಿವಮಾನಪ್ಪ ಅವರು ಮಾತನಾಡಿ, ಧರ್ತಿ ಅಭಾ ಜನಜಾತಿಯ ಗ್ರಾಮ ಉತ್ಕರ್ಷ ಅಭಿಯಾನ ಯೋಜನೆಗೆ ಸಂಬಂಧಿಸಿದಂತೆ ಕೇಂದ್ರ ಬುಡಕಟ್ಟು ವ್ಯವಹಾರಗಳ ಸಚಿವಾಲಯದ ಆದಿಕರ್ಮಯೋಗಿ ಕಾರ್ಯ ಕ್ರಮವು ಬುಡಕಟ್ಟು ಪ್ರದೇಶಗಳಲ್ಲಿ ಬಹುಶ್ರೇಣಿಯ ಜವಾಬ್ದಾರಿಯುತ ಆಡಳಿತವನ್ನು ರೂಪಿಸುವ ಗುರಿ ಹೊಂದಿದ್ದು, ಬುಡಕಟ್ಟು ಜನಾಂಗದ ಸರ್ವತೋಮುಖ ಅಭಿವೃದ್ಧಿಯನ್ನು ಸಾಧಿಸಲು ಸಮುದಾಯದ ತೊಡಗಿಸಿಕೊಳ್ಳುವಿಕೆ, ಸಾಂಸ್ಥಿಕ ಒಗ್ಗೂಡುವಿಕೆ ಹಾಗೂ ಸದೃಢದ ನಾಯಕತ್ವದ ಆಶಯ ಹೊಂದಿದೆ. ಈ ಕಾರ್ಯಕ್ರಮದ ಕುರಿತು ಮೊದಲ ಪ್ರಾದೇಶಿಕ ಕಾರ್ಯಾಗಾರವು ಕಳೆದ ಜುಲೈ ಮಾಹೆಯಲ್ಲಿ ಬೆಂಗಳೂರಿನಲ್ಲಿ ರಾಜ್ಯ ಮಟ್ಟದ ತರಬೇತಿ ಕಾರ್ಯಾಗಾರ ನಡೆಸಲಾಗಿದೆ. ರಾಯಚೂರು ಜಿಲ್ಲೆಗೆ ಸಂಬಂಧಿಸಿದಂತೆ ಮೊದಲ ಹಂತದಲ್ಲಿ 4 ದಿನಗಳ ರಾಜ್ಯಮಟ್ಟದ ತರಬೇತಿ ಕಾರ್ಯಾಗಾರವು ಸಹ ಇಲಾಖೆಗಳ ಜಿಲ್ಲಾ ಮಾಸ್ಟರ್ ಟ್ರೇರ್ಸ್ ಎಂದು ಗುರುತಿಸಲಾದ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಏರ್ಪಡಿಸಲಾಗಿದೆ. ಮುಂದುವರೆದು, ಜಿಲ್ಲಾ ಮಟ್ಟದಲ್ಲಿ ತಾಲೂಕಾ ತರಬೇತಿದಾರರಿಗೆ ತರಬೇತಿಯನ್ನು ನೀಡಲು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ನಿರ್ದೇಶಕರು ಸೂಚಿಸಿದಂತೆ ಆಗಸ್ಟ್ ಮಾಹೆಯಲ್ಲಿ ಓರಿಯಂಟೇಶನ್ ಕಾರ್ಯಕ್ರಮ ನಡೆಸಲಾಗಿದೆ. ಈ ಕಾರ್ಯಾಗಾರದ ಮುಂದುವರೆದ ಭಾಗವಾಗಿ ಇದೀಗ 3 ದಿನಗಳ ತರಬೇತಿ ಕಾರ್ಯಾಗಾರವನ್ನು ತಾಲೂಕು ಮಟ್ಟದ ಅಧಿಕಾರಿಗಳಿಗೆ ನಡೆಸಲಾಗುತ್ತಿದೆ ಎಂದು ತಿಳಿಸಿದರು.

ಈ ತರಬೇತಿ ಕಾರ್ಯಾಗಾರದಲ್ಲಿ ಏಳು ಇಲಾಖೆಗಳಾದ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಶಿಕ್ಷಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಅರಣ್ಯ ಇಲಾಖೆ, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮತ್ತು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗಳ ತಾಲೂಕಾ ಮಟ್ಟದ ಅಧಿಕಾರಿಗಳು ಮಾಸ್ಟರ್ ಟ್ರೇನರ್‌ಗಳಾಗಿ ಭಾಗವಹಿಸಿದ್ದರು.

ಕಾರ್ಯಾಗಾರದಲ್ಲಿ ವಿವಿಧ ರೀತಿಯ ಚಟುವಟಿಕೆಗಳನ್ನು ಪ್ರಾಯೋಗಿಕವಾಗಿ ಮಾಡಿಸಲಾಯಿತು. ಪಿ.ಪಿ.ಟಿ. ಮತ್ತು ವಿಡಿಯೋ ತುಣುಕುಗಳ ಮೂಲಕ ತರಬೇತಿ ನಡೆಸಿ ತರಬೇತಿಯ ಗುಣಮಟ್ಟ ಹೆಚ್ಚಿಸಲಾಯಿತು. ತರಬೇತಿ ಪಡೆದುಕೊಂಡಿರುವ ಬ್ಲಾಕ್ ಮಾಸ್ಟರ್ ಟ್ರೇನರ್‌ಗಳು ಆಯಾ ತಾಲೂಕುಗಳಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕಾ ನೋಡಲ್ ಅಧಿಕಾರಿಗಳೊಂದಿಗೆ ಉಳಿದ ಇಲಾಖೆಗಳು ಜಿಲ್ಲೆಯಲ್ಲಿ ಗುರುತಿಸಲಾದ 243 ಗ್ರಾಮಗಳಲ್ಲಿ ಮಾಹಿತಿಯನ್ನು ತಲುಪಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ತಿಳಿಸಲಾಯಿತು.

ಆದಿ ಕರ್ಮಯೋಗಿ ಅಭಿಯಾನ ತರಬೇತಿ ಕಾರ್ಯಾಗಾರದಲ್ಲಿ ಕತ್ತಲೆಯನು ಶಪಿಸಬೇಡಿ ಬೆಳಕನ್ನು ತನ್ನಿ ಎಂಬ ಇವೆಂಟ್‌ಗೆ ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ನವೀನ್‌ಕುಮಾರ ಅವರು ಚಾಲನೆ ನೀಡಿದರು. ತರಬೇತಿ ಕಾರ್ಯಾಗಾರದಲ್ಲಿ ಭಾಗವಹಿಸಿರುವ 07 ಇಲಾಖೆಗಳು ತರಬೇತಿಯಲ್ಲಿ ಕೈಗೊಳ್ಳಬೇಕಾದ ಕಾರ್ಯಗಳು, ತರಬೇತಿಯ ಉದ್ದೇಶಗಳು ಮತ್ತು ಯೋಜನೆಯ ದೂರದೃಷ್ಠಿಯ ಕುರಿತು ಬಿಇಓ ಕಚೇರಿ ಮಾನವಿಯ ಶಿಕ್ಷಣ ಸಂಯೋಜಕರಾದ ಶ್ರೀ ಮಹ್ಮದ್ ಯುನೂಸ್ ಅವರು ಪಿ.ಪಿ.ಟಿ. ಮೂಲಕ ತರಬೇತಿ ನೀಡಿದರು. ಜಿಲ್ಲಾಮಟ್ಟದ ಮಾಸ್ಟರ್ ಟ್ರೇನರ್‌ಗಳಾದ ರುಕ್ಮೀಣಿಬಾಯಿ, ಈಶ್ವರ ದಾಸಪ್ಪನವರ ಮತ್ತು ಧತ್ತಾತ್ರೇಯ ಅವರು ಮೂಡ್ ಮೀಟರ್ ಇವೆಂಟ್ ನಡೆಸಿಕೊಟ್ಟರು.

**ಪ್ರಮಾಣ ಪತ್ರ ವಿತರಣೆ:** ಆದಿ ಕರ್ಮಯೋಗಿ ಅಭಿಯಾನ ತರಬೇತಿ ಕಾರ್ಯಾಗಾರದಲ್ಲಿ 3 ದಿನಗಳವರೆಗೆ ಭಾಗವಹಿಸಿದ ತರಬೇತಿದಾರರಿಗೆ ಪ್ರಮಾಣ ನೀಡಲಾಯಿತು.

ಸಮಾರಂಭದಲ್ಲಿ ಕೃಷಿ ತಾಂತ್ರಿಕ ಮಹಾವಿದ್ಯಾಲಯದ ಡೀನ್ ಡಾ.ಮಲ್ಲಿಕಾರ್ಜುನ ಎಸ್.ಅಯ್ಯನಗೌಡರ್, ಕೃಷಿ ವಿಶ್ವ ವಿದ್ಯಾಲಯದ ಉಪ ನಿರ್ದೇಶಕರು ಹಾಗೂ ಪ್ರಾಧ್ಯಾಪಕರಾದ ಡಾ.ರಾಜಣ್ಣ, ಮಾನವಿ ತಾಲೂಕಿನ ಬಿ.ಇ.ಓ ಚಂದ್ರಶೇಖರ ದೊಡ್ಮನಿ ಹಾಗೂ ಇನ್ನೀತರರು ಉಪಸ್ಥಿತರಿದ್ದರು

# ಸಹಕಾರಿ ಕ್ಷೇತ್ರದಿಂದ ಜನರ ಆರ್ಥಿಕತೆಯ ಬೆಳವಣಿಗೆ: ಎನ್.ಎಸ್.ಬೋಸರಾಜು

**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.8–**ಪಟ್ಟಣದ ಕಾಕತೀಯ ಶಿಕ್ಷಣ ಸಂಸ್ಥೆಯ ಸಭಾಂಗಣದಲ್ಲಿ ಕಾಕತೀಯ ಸಹಕಾರಿಯ 12 ನೇ ವಾರ್ಷಿಕ ಮಹಾಸಭೆ ಕಾರ್ಯಕ್ರಮವನ್ನು ರಾಜ್ಯ ಸಣ್ಣ ನೀರಾವರಿ ಹಾಗೂ ವಿಜ್ಞಾನ ತಂತ್ರಜ್ಞಾನ ಸಚಿವರಾದ ಎನ್.ಎಸ್.ಬೋಸರಾಜು ಉದ್ಘಾಟಿಸಿ ಮಾತನಾಡಿ ಪರಸ್ಪರ ಸಹಕಾರ ಹಾಗೂ ಉತ್ತಮ ಆಡಳಿತದಿಂದ ಮಾತ್ರ ಸಹಕಾರಿ ಕ್ಷೇತ್ರ ಯಶಸ್ಸು ಸಾಧಿಸುವುದಕ್ಕೆ ಸಾಧ್ಯವಾಗುತ್ತದೆ ಸಹಕಾರಿ ಕ್ಷೇತ್ರದಿಂದ ಜನರ ಆರ್ಥಿಕತೆಯಲ್ಲಿ ಕೂಡ ಉತ್ತಮ ಅಭಿವೃದ್ಧಿ ಹೊಂದುತ್ತಿರುವುದನ್ನು ಕಾಣಬಹುದಾಗಿದೆ. ಸಹಕಾರಿಯ ಅಭಿವೃದ್ದಿಗೆ ಉತ್ತಮ ಆಡಳಿತ ನೀಡುವ ಹಾಗೂ ನೂತನ ಅಲೋಚನೆಗಳನ್ನು ಹೊಂದಿರುವ ಆಡಳಿತ ಮಂಡಳಿಯ ಆಯ್ಕೆ ಪ್ರಮುಖ ಪಾತ್ರ ವಹಿಸುತ್ತದೆ ಸದಸ್ಯರು ಪ್ರಾಮಾಣಿಕವಾಗಿ ವ್ಯವಹರಿಸುವ ಮೂಲಕ ಸಹಕಾರಿ ಸಂಸ್ಥೆಗಳನ್ನು ಅಭಿವೃದಿಯ ಕಡೆಗೆ ಕೊಂಡೊಯ್ಯ ಬೇಕು ಎಂದು ತಿಳಿಸಿದರು.

ಸಹಕಾರಿಯ ಅಧ್ಯಕ್ಷರಾದ ಗುಣ್ಣಂ ಪಾಪರಾವ್ ಮಾತನಾಡಿ ಸಹಕಾರಿಯು ತನ್ನ ಸದಸ್ಯರಿಗೆ ಉತ್ತಮ ಆರ್ಥಿಕ ಸೇವೆಗಳನ್ನು ನೀಡುವುದರ ಜೊತೆಗೆ ,ಉಳಿತಾಯ ಮನೋಭವನೆಯನ್ನು ಕೂಡ ಬೆಳೆಸುತ್ತ ಬಂದಿದೆ ಪ್ರಸಕ್ತಸಾಲಿನಲ್ಲಿ ಸದಸ್ಯರ ಉತ್ತಮ ಸಹಕಾರದಿಂದಾಗಿ ಸಹಕಾರಿಯು 45 ಲಕ್ಷ ಲಾಭವನ್ನು ಹೊಂದುವುದಕ್ಕೆ ಸಾಧ್ಯವಾಗಿದೆ ಎಂದು ತಿಳಿಸಿದರು.



ಶಾಸಕ ಹಂಪಯ್ಯನಾಯಕ ಮಾತನಾಡಿದರು. ಸಹಕಾರಿಯ ಉತ್ತಮ ಗ್ರಾಹಕರನ್ನು ಸನ್ಮಾನಿಸಲಾಯಿತು.

ಸಾನಿಧ್ಯವನ್ನು ವಹಿಸಿ ಕಲ್ಮಠ ಶ್ರೀ ವಿರೂಪಾಕ್ಷ ಪಂಡಿತಾರಾಧ್ಯ ಶಿವಾಚಾರ್ಯ ಮಹಾಸ್ವಾಮಿಗಳು ಆಶೀರ್ವಚನ ನೀಡಿದರು.

ಕಾರ್ಯಕ್ರಮದಲ್ಲಿ ಆರ್.ಡಿ.ಸಿ.ಸಿ. ಬ್ಯಾಂಕ್ ಅಧ್ಯಕ್ಷರಾದ ವಿಶ್ವನಾಥ ಪಾಟೀಲ್ ತೋರಣದಿನ್ನಿ,ಜಿಲ್ಲಾ ಸಹಕಾರ ಭಾರತಿ ಅಧ್ಯಕ್ಷರಾದ ಬಸಪ್ಪ ಕಂದಗಲ್, ತಾ.ಕಮ್ಮವಾರಿ ಸಂಘದ ಅಧ್ಯಕ್ಷರಾದ ನೆಕ್ಕಂಟಿ ಶ್ರೀನಿವಾಸರಾವ್, ಕಾಕತೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಗೊಡವರ್ತಿ ಸತ್ಯನಾರಾಯಣ, ಮುಖಂಡರಾದ ಸುಬ್ರಮಣ್ಯಂ, ಅಬ್ದುಲ್ ಗಾಪೂರ್ ಸಾಬ್, ದೊಡ್ಡಬಸಪ್ಪಗೌಡ ಭೋಗವಾತಿ,ರುದ್ರಪ್ಪ ಅಂಗಡಿ,ಶಿವಮೂರ್ತಿ,ಖಾಲೀದ್ ಖಾದ್ರಿ,ಶರಣಯ್ಯ ನಾಯಕ,ಚಾಂದ್ ಪಾಷಾ ಸೇರಿದಂತೆ ಇನ್ನಿತರರು ಇದ್ದರು.

# ಜೆಸ್ಕಾಂನಿಂದ ಸೆ.10ರಂದು ವಿವಿಧೆಡೆ ವಿದ್ಯುತ್ ವ್ಯತ್ಯಯ

**ರಾಯಚೂರು,ಸೆ.8–**ಇಲ್ಲಿನ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ವ್ಯಾಪ್ತಿಯಲ್ಲಿ 11 ಕೆವಿ ಹೊಸ ಲಿಂಕ್ ಲೈನ್ ಮಾರ್ಗಎಫ್–5 ಮತ್ತು ಎಫ್–8 ಲೋಡ್ ಬೈಫರ್ ಕೇಷನ್ ಕಾಮಗಾರಿ ನಿರ್ವಹಿಸುತ್ತಿರುವ ಪ್ರಯುಕ್ತ ಸೆಪ್ಟೆಂಬರ್ 10ರ ಬೆಳಿಗ್ಗೆ 11 ಗಂಟೆಯಿಂದ ಸಂಜೆ 04 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಕೋರಲಾಗಿದೆ. ಅಂದು ಬೆಳಿಗ್ಗೆ 11ಗಂಟೆಯಿಂದ ಏಗನೂರು ಟೆಂಪಲ್, ಆರ್.ಡಿ.ಎ ಲೇಔಟ್, ಕೃಷ್ಣದೇವರಾಯ ಕಾಲೋನಿ, ತಿರುಮಲ ಹಿಲ್ಸ್, ಸುಚಿತ್ರ ಕಾಲೋನಿ, ಆಶೀರ್ವಾದ ಕಾಲೋನಿ, ಟೌನ್‌ಶಿಪ್, ನವೋದಯ ಎಂಜಿನೀಯರ್ ಕಾಲೇಜ್, ಸಿದ್ರಾಮಪೂರು, ಅಮರ್ಖೇಡ್ ಲೇಔಟ್, ಲಕ್ಷ್ಮಣ್ ಲೇಔಟ್, ವಿಜಯಲಕ್ಷ್ಮಿ ಲೇಔಟ್, ಯಾಸಿನ್ ಜಿಮ್, ಕೆ.ಎಸ್‌ಆರ್.ಟಿ.ಸಿ ಬಸ್ ಡಿಪೋ–3, ಎ.ಎಮ್.ಇಡೆಂಟಲ್ ಕಾಲೇಜ್, ಮಾಣಿಕ್ ಪ್ರಭು ಲೇಔಟ್, ಮಾಣಿಕ್ ನಗರ, ಸರಕಾರಿ ಪಾಲಿಟೆಕ್ನಿಕ್ ಕಾಲೇಜ್, ಸರಕಾರಿ ಐ.ಟಿ.ಐ ಕಾಲೇಜ್ ಸೇರಿದಂತೆ ಸುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 08532–226386, 08532–231999ಗೆ ಸಂಪರ್ಕಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಉಪ ವಿಭಾಗ 1ರ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಶಾಂತಿ, ಸೌಹಾರ್ದದಿಂದ ಗಣನಾಯಕನ ವಿಸರ್ಜನೆ



ಯುವ ಮಾರ್ಗ ಸುದ್ದಿ

**ಅರಕೇರಾ,ಸೆ.8**–ಸಮೀಪದ ಜುಟ್ಟಮರಡಿ ಗ್ರಾಮದ ಶ್ರೀ ಉಟಕನೂರು ತಾತಾನ ದೇವಸ್ಥಾನದ ಬಳಿ ಪ್ರತಿಷ್ಠಾಪಿಸಲಾಗಿದ್ದ ಗಣೇಶನನ್ನು ಶನಿವಾರ ಶಾಂತಿ, ಸೌಹಾರ್ದದಿಂದ ವಿಸರ್ಜನೆ ಮಾಡಲಾಯಿತು.

ಜುಟ್ಟಮರಡಿ ಗ್ರಾಮದಿಂದ ಪಟ್ಟಣವನ್ನು ಪ್ರವೇಶಿಸಿದ ಮೆರವಣಿಗೆ ಮಹರ್ಷಿ ವಾಲ್ಮೀಕಿ ವೃತ್ತ, ಮಹಾತ್ಮ ಗಾಂಧಿ ವೃತ್ತ, ಗೌಡಗೇರಿ ಓಣಿ, ದೇಸಾಯಿ ನಗರ, ಮಠದ ಓಣಿ, ಬಸವ ವೃತ್ತದ ಮೂಲಕ ಪ್ರಮುಖ ಬೀದಿಗಳಲ್ಲಿ ಹೊರಟಿತು. ಜಾಮೀಯಾ ಮಸೀದಿ ಬಳಿ ಹೊರಟಾಗ ಮುಸ್ಲೀಂ ಸಮುದಾಯದವರು ಪ್ರಾರ್ಥನೆ ಸಲ್ಲಿಸುತ್ತಿದ್ದದ್ದನ್ನು ಗಮನಿಸಿದ ಯುವಕರು ಕೆಲ ಹೊತ್ತು ಡಿಜೆ ಸದ್ದು ಮಾಡುವುದನ್ನು ನಿಲ್ಲಿಸಿದ್ದರು. ಬಳಿಕ ಯಥಾವತ್ತಾಗಿ ಪಾಲ್ಗೊಂಡು ಭಾವೈಕ್ಯತೆ ಮೆರೆದರು. ಇದಕ್ಕೂ ಮುನ್ನ ಗಣಪತಿಗೆ ವಿಶೇಷ ಪೂಜೆ ನೆರವೇರಿಸಿ, ಭಕ್ತರಿಗೆ ಅನ್ನ ಪ್ರಸಾದ ವ್ಯವಸ್ಥೆ ಕಲ್ಪಿಸಲಾಗಿತ್ತು. ಮೂರು ಕ್ವಿಂಟಾಲ್ ಅನ್ನ, ಒಂದು ಕ್ವಿಂಟಾಲ್ ಉಗ್ಗಿ, ಸಾಂಬಾರ್ ಮಾಡಲಾಗಿತ್ತು. ಸಾವಿರಾರು ಭಕ್ತರು ಪ್ರಸಾದ ಸ್ವೀಕರಿಸಿದರು.

ಭಕ್ತರು ಕಡುಬು, ಹೋಳಿಗೆ, ಕರ್ಜಿಕಾಯಿ ನಾನಾ ಬಗೆಯ ತಿನಿಸು, ಹಣ್ಣು ಹಂಪಲುಗಳನ್ನು ದೇವರಿಗೆ ನೈವೇದ್ಯ ಅರ್ಪಿಸಿದರು. ನಂತರ ಮಹಾ ಮಂಗಳಾರತಿ ನೆರವೇರಿಸಿದರು. ಮೆರವಣಿಗೆಯಲ್ಲಿ ಯುವಕರು ಕುಣಿದು ಕುಪ್ಪಳಿಸಿ ಸಂಭ್ರಮಿಸಿದರು. ಕೇಸರಿ ಧ್ವಜಗಳು ರಾರಾಜಿಸಿದವು. ಕೆಎಸ್‌ಎನ್ ಅಭಿಮಾನಿ ಬಳಗ, ನಾಗರಾಜ ನಾಯಕ ದಳಪತಿ ಮತ್ತು ಜುಟ್ಟಮರಡಿ ಗೆಳೆಯರ ಬಳಗ ನೇತೃತ್ವ ವಹಿಸಿದ್ದರು.

# ಸೀರತ್ ಅಭಿಯಾನ ಅಂಗವಾಗಿ ಪ್ರವಾದಿ ಮುಹಮ್ಮದ್(ಸ) ರನ್ನು ಅರಿಯಿರಿ ಪುಸ್ತಕ ಬಿಡುಗಡೆ ಸಮಾರಂಭ



ಯುವ ಮಾರ್ಗ ಸುದ್ದಿ

**ಮಾನ್ವಿ:** ಪಟ್ಟಣದ ಈದ್ಗಾ ಫಂಕ್ಷನ್ ಹಾಲ್ ಸಭಾಂಗಣದಲ್ಲಿ ಜಮಾಅತೆ ಇಸ್ಲಾಮಿ ಹಿಂದ್ ಮಾನ್ವಿ ಘಟಕದ ವತಿಯಿಂದ ನಡೆದ ನ್ಯಾಯದ ಹರಿಕಾರ ಪೈಗಂಬರ್ ಮುಹಮ್ಮದ್ (ಸ) ಎಂಬ ಸೀರತ್ ಅಭಿಯಾನ ಅಂಗವಾಗಿ ನಡೆದ ವಿಚಾರ ಗೋಷ್ಠಿ ಹಾಗೂ ಪುಸ್ತಕ ಬಿಡುಗಡೆ ಕಾರ್ಯಕ್ರಮದಲ್ಲಿ ಶಾಂತಿ ಪ್ರಕಾಶನದಿಂದ ಪ್ರಕಟಿಸಲಾದ ಸಬೀಹ ಪಾತೀಮ ಅನುವಾದಿಸಿದ ಪ್ರವಾದಿ ಮುಹಮ್ಮದ್(ಸ) ರನ್ನು ಅರಿಯಿರಿ ಎನ್ನುವ ಪುಸ್ತಕವನ್ನು ರಾಯಚೂರಿನ ಸುದ್ದಿಮೂಲ ದಿನಪತ್ರಿಕೆಯ ಹಿರಿಯ ಸಂಪಾದಕ ರಾದ ಬಸವರಾಜ ಸ್ವಾಮಿ ಬಿಡುಗಡೆಗೊಳಿಸಿ ಮಾತನಾಡಿ ಪ್ರವಾದಿ ಮುಹಮ್ಮದ್(ಸ) ರವರು ಅರಿವಿಗೆ ದೇವರು ,ಅರಿವಿಗೆ ಅಲ್ಲ ,ಅರಿವೆಗುರು ಎಂದು ವಚನಗಳಲ್ಲಿ ಸೂತ್ರಗಳನ್ನು ಬರೆದರು. ದೆಹದಲ್ಲಿನ ಅರಿವನ್ನು ಅಭಿವ್ಯಕ್ತಿಸಿದರು, ಕುರಾನಿನಲ್ಲಿ ಕೂಡ ಸಾವಿರಾರು ಸೂತ್ರಗಳನ್ನು ನಮಗೆ ಕೊಡಲ್ಪಟಿದೆ, ನಮ್ಮ ದೇಹದೊಳಗಿನ ಅರಿವಿನ ಮೂಲಕ ಧರ್ಮವನ್ನು ತಿಳಿದಾಗ ಮಾತ್ರ ನಮಗೆ ಜಾತಿ.ಧರ್ಮಗಳನ್ನು ತಿಳಿಯುವುದಕ್ಕೆ ಸಾಧ್ಯವಾಗುತ್ತದೆ. ಅರಿವಿಗೆ ಅಲ್ಲ ಎಂದು ಪೈಗಂಬರರು ಕರೆದರು ,ಅರವೇ ಗುರು ಎಂದು ಶರಣರು ಕರೆದರು, ನಮ್ಮೊಳಗಿರುವ ಅರಿವನ್ನು ನಾವು ಕಂಡುಕೊಳ್ಳದೆ ಹೋದರೆ ಹೋರಗಿನ ಸಂಪ್ರದಾಯಗಳಿಂದ ನಾವು ಹೋರಬರುವುದಕ್ಕೆ ಸಾಧ್ಯವಿಲ್ಲ.

ದೇವರು ಎನ್ನುವ ಸತ್ಯವನ್ನು ನಾವು ಕಣ್ಣುಗಳಿಂದ ಮಾತ್ರ ನಾವು ನೋಡುವುದಕ್ಕೆ ಸಾಧ್ಯ, ನಾವು ಸೃಷ್ಟಿ ಮಾಡಿದ ದೇವರು ದೇವರಲ್ಲ ನಮ್ಮೊಳಗಿನ ಅರಿವನ್ನು ಕಂಡುಕೊಳ್ಳುವ ಶಿಕ್ಷಣ ನಮ್ಮಗೆ ಸುಲಭವಾಗಿ ದೊರೆಯದೆ ಇರುವುದರಿಂದ ವಿಷಯ ವಸ್ತುವನ್ನು ನಾವು ನೊಡುವುದಕ್ಕೆ ಸಾಧ್ಯವಾಗುತ್ತಿಲ್ಲ. ಆನುಭವವನ್ನು ಎಲ್ಲಾರು ಪಡೆಯುವುದಕ್ಕೆ ಸಾಧ್ಯವಿದೆ. ಇಂದು ಮನುಷ್ಯ ಮನುಷ್ಯರಿಂದಲೇ ಪಾರಗಬೇಕಾಗಿದೆ. ದೇವರಿದ್ದ ದೇಹ,ಅರಿವಿನದೇಹವನ್ನು ಕಂಡು ಕೊಂಡ ಶರಣರು ಶರಣರಾ ದರೆ, ದಾಸರಾದವರು ದಸಾರದರು, ವಚನಗಳ ಆಳಕ್ಕೆ ಹೋಗಿ ನಮ್ಮನ್ನು ನಾವು ನೋಡಿಕೊಳ್ಳುವುದಕ್ಕೆ ಸಾಧ್ಯವಾದರೆ ಮಾತ್ರ ನಮ್ಮಲಿನ ಅಜ್ಞಾನ ಕಳೆದು ಸುಜ್ಞಾನ ಬೆಳೆಯುವುದಕ್ಕೆ ಸಾಧ್ಯವಾಗುತ್ತದೆ ,ನಮ್ಮಲಿಮ ಜ್ಞಾನವನ್ನು ಬಳಕೆ ಮಾಡದೆ ಇದ್ದಲ್ಲಿ ಅಜ್ಞಾನ ನಮ್ಮನ್ನು ನಾಶ ಮಾಡುತ್ತದೆ ಪ್ರವಾದಿಗಳನ್ನು ಪೂಜಿಸದೆ ಅವರ ಮಾರ್ಗದಲ್ಲಿ ನಡೆದಾಗ ಮಾತ್ರ ನಾವು ಅವರಂತೆ ಆಗುವುದಕ್ಕೆ ಶಾಂತಿಯಿಂದ ಬಾಳುವುದಕ್ಕೆ .ಎಲ್ಲಾರಲ್ಲಿಯು ಸಮಾನತೆಯನ್ನು ಕಾಣುವುದಕ್ಕೆ ಸಾಧ್ಯವಾಗುತ್ತದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ರಾಜ್ಯ ಜಮಾಅತೆ ಇಸ್ಲಾಮಿ ಹಿಂದ್‌ಕಾರ್ಯದರ್ಶಿಗಳಾದ ಜನಾಬ್ ಅಕ್ಬರ್ ಅಲಿ ಉಡುಪಿ ಮಾತನಾಡಿ ಜಗತ್ತಿನಲ್ಲಿ ಎರಡನೇ ಅತಿ ದೊಡ್ಡ ಜನಸಂಖ್ಯೆಯನ್ನು ಹೊಂದಿರುವ ಮುಸ್ಲಿಂ ಧರ್ಮವು ಎಲ್ಲಾರನ್ನು ,ಎಲ್ಲಾವನ್ನು ಸೃಷ್ಟಿಸಿದ ಸೃಷ್ಟಿಕರ್ತನು ಭೂಮಿಯಲ್ಲಿನ ಜನರಿಗೆ ಮಾರ್ಗದರ್ಶಕರನ್ನಾಗಿ ನ್ಯಾಯಯುಗ ಪ್ರಾರಂಭಕ್ಕಾಗಿ ಪ್ರವಾದಿ ಮುಹಮ್ಮದ್(ಸ) ರವರನ್ನುಕಳುಹಿಸಿದ್ದನೆ. ಜಗತ್ತನ್ನು ಸೃಷ್ಟಿಸಿದ ದೇವರು ಒಬ್ಬನೇ ಇದ್ದನೇ ಅವನು ಲೋಕವನ್ನು ನಮ್ಮಗಾಗಿ ಸೃಷ್ಟಿಸಿದ್ದಾನೆ, ಅರಾಧಿಸುತ್ತದೆ. ಇಸ್ಲಾಂ ಧರ್ಮವು ಶಾಂತಿಯನ್ನೆ ಬೋಧಿಸುತ್ತದೆ .

ಧರ್ಮ ಎಲ್ಲಿ ಇರುತ್ತದೆಯೇ ಅಲ್ಲಿ ಶಾಂತಿ ಇರುತ್ತದೆ.ಶಾಂತಿಯನ್ನು ಬೋಧಿಸುವುದೆ ಧರ್ಮವಾಗಿದೆ. ಧರ್ಮ ವನ್ನು ಜೀವನದಲ್ಲಿ ಅಳವಡಿಸಿಕೊಂಡು ಅದರ್ಶ ಜೀವನವನ್ನು ನಡೆಸಬಹುದು. ಜಗತ್ತಿಗೆ ಒಂದೇ ಧರ್ಮ ಇರುವುದು ಯಾರು ನ್ಯಾಯವನ್ನು ಪಾಲನೆ ಮಾಡುತ್ತಾರೋ ಅವರನ್ನು ಅಲ್ಲಹನ್ನು ಪ್ರೀತಿಸುತ್ತಾನೆ ನಿನ್ನ ಜಾನಂಗ ಅನ್ಯಾಯ ಮಾಡಿದರೆ ಅದು ಕೋಮುವಾದ ವಾಗುತ್ತದೆ.ಅನ್ಯಾಯದ ಪರ ನಿಲ್ಲುವವರು, ಕೋಮುವಾದಕ್ಕೆ ಬೆಂಬಲ ನೀಡುವವರು ನಮ್ಮವರಲ್ಲ ಎನ್ನುತ್ತಾರೆ ಪೈಗಂಬರರು ಎಂದು ತಿಳಿಸಿದರು.

ಅಬ್ದುಲ್ ಗಾಪೂರ್ ಸಾಬ್, ರಾಯಚೂರು ಜೆ.ಐ.ಹೆಚ್. ವಿಭಾಗೀಯ ಸಂಚಾಲಕರಾದ ಮೌಲಾನ ಅನ್ವರ್ ಪಾಷ ಉಮ್ರಿ, ಜಮಾಅತೆ ಇಸ್ಲಾಮಿ ಹಿಂದ್ ತಾ.ಅಧ್ಯಕ್ಷರಾದ ಅಬ್ದುಲ್ ರೆಹಮಾನ್ , ತಾ.ಪ್ರ.ಕಾರ್ಯ ದರ್ಶಿ ಸಬ್ಜಲಿಸಾಬ್, ರಾಬ್ತೆ ಮಿಲ್ಲತ್ ,ಜ.ಇ.ಹಿ. ಮಾನ್ವಿ ಘಟಕದ ಅಧ್ಯಕ್ಷರಾದ ಸೈಯಾದ್ ಅಕ್ಬರ್ ಸಾಬ್, ಶಂಕ್ರಯ್ಯಸ್ವಾಮಿ ಸುವರ್ಣಗೀರಿಮಠ,ಜಿ, ಸುಧಾಕ 'ರ್,ರೌಡೂರು ಮಹಾಂತೇಶಸ್ವಾಮಿ, ರಮೇಶಬಾಬು ಯಾಳಗಿ, ಅಕ್ಕಮ್ಮಕ್ಕ,ಗುರುನಾಥ, ಸರ್ಕಾರಿ ನೌಕರರ ಸಂಘದ ತಾ.ಅಧ್ಯಕ್ಷರಾದ ಸುರೇಶಕುರ್ಡಿ, ಸಾವಿತ್ರಿ ಬಾಯಿ ಪುಲೆ ಮಹಿಳಾ ಸಂಘದ ಅಧ್ಯಕ್ಷರಾದ ಮಂಜುಳಾ ಹಿರೇಮಠ,ಅಭಿಯಾನದ ಸಂಚಾಲ ಕರಾದ ಎಂ.ಎ.ಹೆಚ್.ಮುಖೀಮ್,ಮಾಧ್ಯಮ ಕಾರ್ಯ ದರ್ಶಿ ಉಮರ್ ಫಾರೂಖ್ ದೇವರಮನಿ,ಬಾಷಾ ಚಿಮಲಪುರ್, ಸೈಯಾದ್ ನುಸರತ್ ಜಹ, ಸೈಯಾದ್ ಇಶರತ್, ಸೇರಿದಂತೆ ಇನ್ನಿತರರು ಇದ್ದರು. ರಾಯಚೂರಿನ ಸುದ್ದಿಮೂಲ ದಿನಪತ್ರಿಕೆಯ ಹಿರಿಯ ಸಂಪಾದ 'ಕರಾದ ಬಸವರಾಜ ಸ್ವಾಮಿ ರವರನ್ನು ಕಾರ್ಯಕ್ರಮದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಸುದ್ದಿ ಮತ್ತು ಜಾಹೀರಾತಿಗಾಗಿ ಸಂಪರ್ಕಿಸಿ

9743497111 9743496111

# ಸಾಮಾಜಿಕ, ಶೈಕ್ಷಣಿಕ ಸ್ಥಿತಗತಿಯ ಸಮೀಕ್ಷೆ ಅಚ್ಚುಕಟ್ಟಾಗಿ ನಡೆಯಲಿ: ನಿತೀಶ್ ಕೆ.



ಯುವ ಮಾರ್ಗ ಸುದ್ದಿ

**ರಾಯಚೂರು,ಸೆ.8**–ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ನಡೆಸುವ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷಾ ಕಾರ್ಯಕ್ಕಾಗಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚನೆಯಾದ ಜಿಲ್ಲಾಮಟ್ಟದ ಸಮನ್ವಯ ಸಮಿತಿಯ ಮೊದಲ ಸಭೆಯು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಇತ್ತೀಚೆಗೆ ನಡೆಯಿತು.

ಈ ವೇಳೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಮಾತನಾಡಿ, ರಾಜ್ಯ ಹಿಂದುಳಿದ ವರ್ಗಗಳ ಆಯೋಗದಿಂದ ಕರ್ನಾಟಕ ರಾಜ್ಯದ ನಾಗರೀಕರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಬಗೆಗಿನ ಸಮೀಕ್ಷಾ ಕಾರ್ಯ ಶೀಘ್ರ ಆರಂಭವಾಗಲಿದ್ದು, ಈ ಸಮೀಕ್ಷೆ ಸಂಬಂಧ ಸರಕಾರವು ಕಾಲಕಾಲಕ್ಕೆ ಹೊರಡಿಸುವ ನಿರ್ದೇಶನವನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ತಿಳಿಸಿದರು.

ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಗೆ ಸಂಬಂಧಿಸಿದಂತೆ ಸರಕಾರದಿಂದ ನೀಡಲಾಗುವ ಸೂಚನೆಗಳು ಹಾಗು ಮಾರ್ಗಸೂಚಿಗಳನ್ನು ಸಂಬಂಧಪಟ್ಟ ಅಧಿಕಾರಿ ಹಾಗೂ ಸಿಬ್ಬಂದಿಯು ಸರಿಯಾಗಿ ಗಮನಿಸಿ, ಮಾಸ್ಟರ್ ಟ್ರೇನರಗಳು, ಗಣತಿದಾರರು ಮತ್ತು ಮೇಲ್ವಿಚಾರಕರಿಗೆ ತಿಳಿಸಬೇಕು. ಇದಕ್ಕೆ ಸಂಬಂಧಿಸಿದಂತೆ ಏನಾದರು ಗೊಂದಲಗಳಿದ್ದರೆ ಹಿರಿಯ ಅಧಿಕಾರಿಗಳಿಂದ ಕೇಳಿ ತಿಳಿದುಕೊಳ್ಳಬೇಕು. ಯಾವುದೇ ರೀತಿಯ ವ್ಯತ್ಯಾಸವಾಗದಂತೆ ಸಮೀಕ್ಷೆ ಕಾರ್ಯವು ಅಚ್ಚುಕಟ್ಟಾಗಿ ನಡೆಯುವಂತೆ ನೋಡಿಕೊಳ್ಳಬೇಕು ಎಂದು ಅವರು ಅಧಿಕಾರಿಗಳಿಗೆ ಸೂಚನೆ ನೀಡಿದರು.

2024ನೇ ಸಾಲಿನಲ್ಲಿ ಜಿಲ್ಲಾ ಸಾಂಖ್ಯಿಕ ಇಲಾಖೆಯ ಪ್ರಕಾರ ಅಂದಾಜು 4,75,000 ಕುಟುಂಬಗಳಿರುವುದಾಗಿ ಮಾಹಿತಿ ಇದೆ. ಯಾವುದೇ ಕುಟುಂಬವು ಸಮೀಕ್ಷೆಯಿಂದ ಹೊರಗುಳಿಯದಂತೆ ಎಚ್ಚರ ವಹಿಸಬೇಕು. ಸಾಮಾನ್ಯವಾಗಿ ಎಲ್ಲಾ ವಾಸದ ಮನೆಗಳಿಗೆ ವಿದ್ಯುತ್ ಸಂಪರ್ಕ ಇರುವುದರಿಂದ ವಿದ್ಯುತ್ ಬಿಲ್ಲಿನ ಆರ್‌ಆರ್ ಸಂಖ್ಯೆ ಆಧಾರದ ಮೇಲೆಯು ಸಹ ಮನೆಗಳನ್ನು ಗುರುತಿಸಿ ಅಲ್ಲಿರುವ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಮಾಡಬೇಕು. ವಿದ್ಯುತ್ ಸಂಪರ್ಕವಿಲ್ಲದ ಮನೆಗಳಿಗು ಸಹ ಗ್ರಾಮ ಆಡಳಿತ ಅಧಿಕಾರಿಗಳ ಮೂಲಕ ಸಂಪರ್ಕ ಮಾಡಬೇಕು ಎಂದು ತಿಳಿಸಿದರು.

ಅಧಿಕಾರಿಗಳು ಪರಸ್ಪರ ಸಮನ್ವಯವಹಿಸಿ ಈ ಸಮೀಕ್ಷೆ ಕೈಗೊಳ್ಳಬೇಕು. ಯಾವುದೇ ಲೋಪದೋಷಗಳು ಆಗಬಾರದು. ತಾಲೂಕು ಮಟ್ಟದಲ್ಲಿ ಸಹ ಸಮೀಕ್ಷಾ ಕಾರ್ಯ ಅಚ್ಚುಕಟ್ಟಾಗಿ ನಡೆಯಬೇಕು. ಗ್ರಾಮಗಳಿಗೆ ಭೇಟಿ ನೀಡಿ ಪ್ರತಿಯೊಂದು ಮನೆಗಳ ಸರ್ವೆ ಮಾಡಬೇಕು. ಈ ಬಗ್ಗೆ ಆಯಾ ತಾಲೂಕುಗಳ ತಹಸೀಲ್ದಾರ್‌ಗಳು ಮತ್ತು ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಮೇಲ್ವಿಚಾರಣೆ ಮಾಡಬೇಕು ಎಂದು ಸೂಚನೆ ನೀಡಿದರು.

ಈ ಸಮೀಕ್ಷೆ ಕಾರ್ಯಕ್ಕೆ ಮಾಸ್ಟರ್ ಟ್ರೇನರ್ ಹಾಗೂ ಮೇಲ್ವಿಚಾರಕರು ಮತ್ತು ಗಣತಿದಾರರ ಅಗತ್ಯತೆ ಇರುತ್ತದೆ. ಈ ಕಾರ್ಯಕ್ಕಾಗಿ 65 ಜನ ಮಾಸ್ಟರ್ ಟ್ರೇನರ್, ಪ್ರತಿ 150 ಮನೆಗಳಿಗೆ ಒಬ್ಬ ಗಣತಿದಾರರು, 20 ಗಣತಿದಾರರಿಗೆ ಒಬ್ಬರು ಮೇಲ್ವಿಚಾರಕರಂತೆ ನೇಮಿಸಿ ಸಮೀಕ್ಷೆಯನ್ನು ಅಚ್ಚುಕಟ್ಟಾಗಿ ನಡೆಸಬೇಕು. ಗಣತಿದಾರರನ್ನಾಗಿ ಪ್ರಾಥಮಿಕ ಶಾಲಾ ಶಿಕ್ಷಕರನ್ನು ನೇಮಿಸಲು ಮತ್ತು ಮೇಲ್ವಿಚಾರಕರನ್ನಾಗಿ ಸಿಆರ್‌ಪಿಗಳನ್ನು ನೇಮಿಸಲು ಈ ಸಂಬಂಧ ಕೂಡಲೇ ಶಾಲಾ ಶಿಕ್ಷಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ ಮತ್ತು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಗೆ ಪತ್ರ ಬರೆದು ಕ್ರಮ ವಹಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು ಬಿಸಿಎಂ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕಾರ್ಯವು ಸೆ.22ರಿಂದ ಆರಂಭವಾಗಿ ಅಕ್ಟೋಬರ್ 7ರೊಳಗೆ ಪೂರ್ಣಗೊಳಿಸಲಾಗುತ್ತದೆ. ಸುಮಾರು 65 ಪ್ರಶ್ನಾವಳಿಗಳಿದ್ದು, ಕುಟುಂಬಗಳಿಂದ ಮಾಹಿತಿ ಪಡೆದು ಆಪ್ ಮೂಲಕವೇ ಸಮೀಕ್ಷೆ ಮಾಡಲಾಗುತ್ತದೆ. ಜಿಲ್ಲೆಯಲ್ಲಿನ ಒಟ್ಟು ಕುಟುಂಬಗಳ ಸಂಖ್ಯೆಗೆ ಅನುಗುಣವಾಗಿ ಪ್ರತಿ ಸಮೀಕ್ಷೆದಾರರು ಎಲ್ಲಾ ಮನೆಗಳಿಗೆ ಖುದ್ದು ಭೇಟಿ ನೀಡಿ ಸಮೀಕ್ಷೆ ನಡೆಸಲಿದ್ದಾರೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ಸುನೀತಾ ಅವರು ಸಭೆಗೆ ಮಾಹಿತಿ ನೀಡಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಈಶ್ವರ ಕುಮಾರ್ ಕಾಂದೂ, ರಾಯಚೂರು ಮಹಾನಗರ ಪಾಲಿಕೆ ಆಯುಕ್ತರಾದ ಜುಬೀನ್ ಮೊಹಪಾತ್ರ, ರಾಯಚೂರು ಸಹಾಯಕ ಆಯುಕ್ತರಾದ ಗಜಾನನ ಬಾಳೆ, ರಾಯಚೂರು ನಗರಾಭಿವೃದ್ಧಿ ಕೋಶದ ಅಧಿಕಾರಿ ತಿಮ್ಮಪ್ಪ ಸೇರಿದಂತೆ ವಿವಿಧ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು ಸಭೆಯಲ್ಲಿ ಇದ್ದರು.

# ಯುವಕ ಕಾಣೆ: ಪತ್ತೆಗೆ ಸದರ್ ಬಜಾರ್ ಪೊಲೀಸರ ಮನವಿ



**ರಾಯಚೂರು,ಸೆ.8**–ಇಲ್ಲಿನ ಸದರ್ ಬಜಾರ್ ಪೊಲೀಸ್ ಠಾಣೆಯ ವ್ಯಾಪ್ತಿಯ ಅಂದ್ರೂನ್ ಕಿಲಾ ನಿವಾಸಿಯಾದ ಮೊಹಮ್ಮದ್ ನಾಜೆಫ್ ತಂದೆ ಮೊಹ್ಮದ್ ಅಫ್ಜಲ್ (21) ಎಂಬ ಯುವಕ ಸೆಪ್ಟೆಂಬರ್ 3ರ ಬೆಳಿಗ್ಗೆ 9 ಗಂಟೆ ಸುಮಾರಿಗೆ ಮನೆಯಲ್ಲಿ ಪೋಷಕರೊಂದಿಗೆ ಜಗಳ ಮಾಡಿಕೊಂಡು ಮನೆಯಿಂದ ಹೊರಹೋದವನು ಮರಳಿ ಮನೆಗೆ ಬಾರದೆ ಕಾಣೆಯಾಗಿದ್ದು, ಠಾಣೆಯಲ್ಲಿ ಗುನ್ನೆ ಸಂಖ್ಯೆ: 87/2025 ಕಲಂರಡಿ ಪ್ರಕರಣ ದಾಲಖಾಗಿದೆ.

**ಯುವಕನ ಚಹರೆ:** ವಯಸ್ಸು 21 ವರ್ಷ, 5.6 ಅಡಿ ಎತ್ತರ, ಕಪ್ಪು ಬಣ್ಣದ ಕೂದಲು, ಕೆಂಪು ಮೈಬಣ್ಣ, ಬಿಳಿ ಬಣ್ಣದ ಗ್ರೇ ಗೆರೆಗಳುಳ್ಳ ಅಂಗಿ, ಗ್ರೇ ಬಣ್ಣದ ಪ್ಯಾಂಟ್ ಧರಿಸಿದ್ದು, ಕನ್ನಡ ಉರ್ದು, ಹಿಂದಿ ಹಾಗೂ ಇಂಗ್ಲೀಷ್ ಭಾಷೆ ಮಾತನಾಡುತ್ತಾನೆ.

ಈ ಯುವಕ ಪತ್ತೆಯಾದಲಿ ಸದರ್ ಬಜಾರ್ ಪೊಲೀಸ್ ಠಾಣೆ ಮೊಬೈಲ್ ನಂಬರ್: 08532–226148, ಸದರ್ ಬಜಾರ್ ಪೊಲೀಸ್ ಠಾಣೆಯ ಅರಕ್ಷಕ ನಿರೀಕ್ಷಕರು ಮೊಬೈಲ್ ನಂಬರ್: 9480803830ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಠಾಣೆಯ ಅರಕ್ಷಕ ನಿರೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಡಗರದಿಂದ ಆರೋಗ್ಯ ಮಾತೆಯ ಹಬ್ಬ ಆಚರಣೆ



ಯುವ ಮಾರ್ಗ ಸುದ್ದಿ

**ಲಿಂಗಸುಗೂರು,ಸೆ.8**– ಪಟ್ಟಣದ ಲೂರ್ದು ಮಾತೆ ಚರ್ಚ್‌ನಲ್ಲಿ ಆರೋಗ್ಯ ಮಾತೆಯ ಹಬ್ಬವನ್ನು ಸಡಗರ ಸಂಭ್ರಮದಿಂದ ಆಚರಣೆ ಮಾಡಲಾಯಿತು.

ಚರ್ಚ್‌ನಲ್ಲಿ ಮಾತೆಯ ಹಬ್ಬದ ಪ್ರಯುಕ್ತ ವಿಶೇಷ ಬಲಿಪೂಜೆಯನ್ನು ಮಾಡಲಾಯಿತು ಈ ಬಲಿಪೂಜೆಯ ಸಂದರ್ಭದಲ್ಲಿ ಪ್ರಭೋದನೆ ನೀಡಿದ ವಂದನೀಯ ಗುರುಗಳಾದ ಫಾ.ಜೋಸ್‌ಪ್ರಕಾಶ್ ಅಮ್ಮ ಎನ್ನುವ ಕರೆ ಚೆಂದ, ನೆಮ್ಮದಿ ನೀಡುವ ಮಕರಂದ. ಅ ಎಂದರೆ ಅಮೃತ, ಮ್ಮ ಎಂದರೆ ಮಧುರ ಮಮತೆಯ ಸಮ್ಮಿಲನ. ಅಮ್ಮ ಎಂದರೆ ಏನೋ ಒಂತರಾ ರೋಮಾಂಚನ, ಸವಿದವನೇ ಬಲ್ಲ ಬೆಲ್ಲದ ರುಚಿಯ ಎನ್ನುವಂತೆ ತಾಯಿಯ ಪ್ರೀತಿ ಸವಿದವನಿಗೆ ಗೊತ್ತು ಆ ಪ್ರೀತಿಯ ಮಹತ್ವ, ತಾಯಿ, ಸಹನಮಯಿ, ತ್ಯಾಗಮಯಿ, ಪ್ರೇಮಮಯಿ. ಕ್ರೈಸ್ತರಾದ ನಮಗೆ ಇಬ್ಬರೂ ತಾಯಿಯಂದರು, ಭೌತಿಕವಾಗಿ ನಮಗೆ ಜನ್ಮನೀಡಿದ ತಾಯಿ ಒಬ್ಬರಾದರೆ ಮರಿಯ ನಮ್ಮೆಲ್ಲರ ಆಧ್ಯಾತ್ಮಿಕ ತಾಯಿಯಾಗಿದ್ದಾರೆ. ಇಂದು ಈ ತಾಯಿ ಮರಿಯಮ್ಮನವರು ಹುಟ್ಟಿದ ದಿನ: ಸುದಿನ ಪ್ರತಿಯೊಂದು ಮಗುವಿನ ಜನನ ಕುಟುಂಬದಲ್ಲಿ ಆನಂದವನ್ನು ತರುತ್ತದೆ.

ಮಾತೆ ಮರಿಯಳ ಜನನ ಈ ದಿನ ಇಡೀ ಜಗತ್ತಿಗೆ ಸಂತೋಷವನ್ನು ತರುತ್ತದೆ. ಕಥೋಲಿಕರಾದ ನಾವು ಮರಿಯಳನ್ನು ಪೂಜಿಸುವುದಿಲ್ಲ ಬದಲಾಗಿ ಗೌರವಿಸುತ್ತೇವೆ. ಮರಿಯಳು ದೇವತೆಯಾಗಿರಲಿಲ್ಲ ಪ್ರವಾದಿನಿಯಾಗಿರಲಿಲ್ಲ. ಆದರೂ ಕನ್ನಿಕೆಯಾಗಿ ಉಳಿಯಲು ಮುಗ್ಧಯುವತಿಯಾಗಿದ್ದಳು. ದೇವರು ಅವರನ್ನು ತಮ್ಮ ರಕ್ಷಣಾ ಕಾರ್ಯದಲ್ಲಿ ಭಾಗಿಯಾಗಿ ಕ್ರಿಸ್ತನ ತಾಯಿಯಾಗಲು ಅನಾದಿಯಿಂದಲೇ ಆರಿಸಿಕೊಂಡಿದ್ದರು. ಆದ್ದರಿಂದ ಭಾರತದಲ್ಲಿ ಇಂದು ಹೆಣ್ಣು ಮಕ್ಕಳ ದಿನಾಚರಣೆ ಎಂದು ಆಚರಣೆ ಮಾಡಲಾಗುತ್ತಿದೆ ಎಂದರು.

ಈ ಸಂದರ್ಭದಲ್ಲಿ ಪಾಲನಾ ಸಮಿತಿ ಕಾರ್ಯದರ್ಶಿ ಅಮರೇಶ ಘಂಟಿ, ಪ್ರಾನ್ಸಿಸ್‌ಕುಮಾರ್, ವಿಶ್ವಾಸಪ್ಪ ಮಾಸ್ತರ್, ಸಂತೋಷ್, ಕಾರ್ಮೇಲ್ ನಿವಾಸದ ಸಿಸ್ಟರ್ ಸೂಪರಿಯರ್ ಕೀರ್ತನ್, ಸಿಸ್ಟರ್ ಶಾಂತಿ ಲವೀನಾ ಸೇರಿ ಭಕ್ತರು ಇದ್ದರು.

## ರಾಯಚೂರು ಜಿಲ್ಲೆಯ ಪ್ರೌಢಶಾಲೆಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ ನಡೆಸಲು ಅವಧಿ ವಿಸ್ತರಣೆ

**ರಾಯಚೂರು,ಸೆ.8–**ಅಕ್ಟೋಬರ್ 2ರಂದು ನಡೆಯುವ ರಾಷ್ಟ್ರಪಿತ ಮಹಾತ್ಮ ಗಾಂಧೀಜಿಯವರ 156ನೇ ಜಯಂತಿಯ ಅಂಗವಾಗಿ ರಾಯಚೂರು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹಾಗೂ ಶಾಲಾ ಶಿಕ್ಷಣ ಇಲಾಖೆಯ ಸಹಯೋಗದಲ್ಲಿ ರಾಯಚೂರ ಜಿಲ್ಲೆಯ ಎಲ್ಲ ಪ್ರೌಢಶಾಲೆಗಳಲ್ಲಿ ಬಾಪೂಜಿ ಪ್ರಬಂಧ ಸ್ಪರ್ಧೆ ಆಯೋಜಿಸಲಾಗಿದೆ.

ದೇವದುರ್ಗ, ಲಿಂಗಸಗೂರ, ಮಾನವಿ, ರಾಯಚೂರು ಮತ್ತು ಸಿಂಧನೂರ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಈ ಸಂಬಂಧ ಈಗಾಗಲೇ ಪತ್ರ ಬರೆದು ತಮ್ಮ ತಮ್ಮ ವ್ಯಾಪ್ತಿಯ ಎಲ್ಲ ಪ್ರೌಢಶಾಲೆಗಳಲ್ಲಿ ಈ ಪ್ರಬಂಧ ಸ್ಪರ್ಧೆಯನ್ನು ಆಯೋಜನೆ ಮಾಡುವಂತೆ ತಿಳಿಸಲಾಗಿದೆ. ಸೆಪ್ಟೆಂಬರ್ 10ರವರೆಗೆ ಈ ಪ್ರಬಂಧ ಸ್ಪರ್ಧೆಯನ್ನು ನಡೆಸಲು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಅವಕಾಶ ಕಲ್ಪಿಸಿದ್ದಾರೆ. ಆದ್ದರಿಂದ ಇದುವರೆಗೆ ಪ್ರಬಂಧ ಸ್ಪರ್ಧೆಯನ್ನು ಏರ್ಪಡಿಸದೇ ಇರುವ ಆಯಾ ಶಾಲೆಗಳ ಮುಖ್ಯ ಗುರಗಳು ಈ ಬಗ್ಗೆ ಕೂಡಲೇ ಗಮನ ಹರಿಸಿ ತಮ್ಮ ತಮ್ಮ ಶಾಲೆಗಳ ವಿದ್ಯಾರ್ಥಿಗಳಿಗೆ ಈ ಪ್ರಬಂಧ ಸ್ಪರ್ಧೆಯ ಮಾಹಿತಿ ನೀಡಿ ಸೆಪ್ಟೆಂಬರ್ 10ರೊಳಗೆ ಸ್ಪರ್ಧೆಗೆ ಆಯೋಜನೆ ಮಾಡಬೇಕು. ಆಸಕ್ತ ವಿದ್ಯಾರ್ಥಿಗಳು ತಮ್ಮ ತಮ್ಮ ಶಾಲೆಗಳಲ್ಲಿ ನಡೆಯುವ ಈ ಪ್ರಬಂಧ ಸ್ಪರ್ಧೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗಿಯಾಗಬೇಕು. ವಿದ್ಯಾರ್ಥಿಗಳು ಬರೆದ ಎಲ್ಲ ಪ್ರಬಂಧಗಳನ್ನು ಆಯಾ ಶಾಲೆಯ ಮುಖ್ಯ ಗುರುಗಳು, ಆಯಾ ತಾಲೂಕಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಸಲ್ಲಿಸಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಡಿ.ಬಡಿಗೇರ ಅವರು ತಿಳಿಸಿದ್ದಾರೆ.

1.ಸ್ವಚ್ಚತೆಯ ಪಾಠ–ಗಾಂಧೀಜಿಯವರ ಸಂದೇಶ, 2.ಮಕ್ಕಳ ಭವಿಷ್ಯ ನಿರ್ಮಾಣದಲ್ಲಿ ಗಾಂಧೀಜಿಯವರ ಪಾತ್ರ, 3.ಗಾಂಧೀಜಿಯವರ ಸ್ವಾತಂತದ ಕನಸು– ನನ್ನ ಕಲ್ಪನೆ ಈ ಮೂರು ವಿಷಯಗಳಲ್ಲಿ ಯಾವುದಾದರೂ ಒಂದು ವಿಷಯ ಕುರಿತು 700 ರಿಂದ 800 ಪದಗಳು ಮೀರದಂತೆ ಪ್ರೌಢಶಾಲಾ ವಿದ್ಯಾರ್ಥಿಗಳು ಪ್ರಬಂಧ ಬರೆಯಬೇಕು.

ಪ್ರಬಂಧವು ಸಂಪೂರ್ಣವಾಗಿ ಸ್ವರಚಿತವಾಗಿರಬೇಕು., ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿಯೇ ಶುದ್ಧ ಕೈಬರಹದಲ್ಲಿ ಪ್ರಬಂಧ ಬರೆಯಬೇಕು., ಆಕಾರವಾಗಿ ಬಳಸಿದ ಪರಾಮರ್ಶನ/ ಆಧಾರ ಗ್ರಂಥಗಳ ವಿವರಗಳನ್ನು ಪ್ರಬಂಧದ ಕೊನೆಯಲ್ಲಿ ನಮೂದಿಸಬೇಕು. ಸ್ಪರ್ಧೆ ಏರ್ಪಡಿಸುವ ಸ್ಥಳದಲ್ಲಿ ಪರಾಮರ್ಶನ/ ಆಧಾರಗ್ರಂಥಗಳು/ಮೊಬೈಲ್‌ಗಳ ಬಳಕೆಗೆ ಅವಕಾಶ ವಿರುವುದಿಲ್ಲ., ಪ್ರಬಂಧಕಾರರ ಹೆಸರು, ವಿಳಾಸ, ಮೊಬೈಲ್ ಸಂಖ್ಯೆ ನಮೂದಿಸಿರಬೇಕು., ಪ್ರಬಂಧವು ಈ ಮೊದಲು ಎಲ್ಲಿಯೂ ಪ್ರಕಟವಾಗಿರಬಾರದು. ಆಯ್ದ ಪ್ರಬಂಧಗಳ ಪ್ರಕಟಣೆಯ ಹಕ್ಕನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಹೊಂದಿರುತ್ತದೆ.

ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಅಕ್ಟೋಬರ್ 2ರ ಮಹಾತ್ಮಗಾಂಧೀಜಿ ಜಯಂತಿ ಸಮಾರಂಭದಲ್ಲಿ ಜಿಲ್ಲಾಮಟ್ಟದಲ್ಲಿ ಪ್ರಥಮ 3000 ರೂ, ದ್ವಿತೀಯ 2000 ರೂ. ಮತ್ತು ತೃತೀಯ 1000 ರೂ. ನೀಡಲಾಗುತ್ತದೆ. ರಾಜ್ಯಮಟ್ಟದಲ್ಲಿ ಪ್ರಥಮ 31000 ರೂ, ದ್ವಿತೀಯ 21,000 ರೂ. ಮತ್ತು ತೃತೀಯ 11,000 ರೂ. ನೀಡಲಾಗುತ್ತದೆ.

ಹೆಚ್ಚಿನ ಮಾಹಿತಿಗೆ ವಾರ್ತಾ ಇಲಾಖೆಯ ವಾರ್ತಾ ಸಹಾಯಕರಾದ ಗವಿಸಿದ್ದಪ್ಪ ಹೊಸಮನಿ ಮೊ.9008462236 ಅಥವಾ ಪ್ರಥಮ ದರ್ಜೆ ಸಹಾಯಕರಾದ ಲಿಂಗರಾಜ್ ಮೊ:9743892080 ಇವರಿಗೆ ಸಂಪರ್ಕಿಸಬಹುದಾಗಿದೆ ಎಂದು ಅವರು ತಿಳಿಸಿದ್ದಾರೆ.

## ಪಂಚವಟಿ ಆರ್ಯುವೇದಿಕ್ ಚಿಕಿತ್ಸೆ ಕೇಂದ್ರದ ಸದ್ಬಳಕೆ ಯಾಗಲಿ –ಹೂನೂರು




**ಲಿಂಗಸುಗೂರು,ಸೆ.8–** ನಮ್ಮ ಭಾಗದಲ್ಲಿ ನೈಸರ್ಗಿಕ ಚಿಕಿತ್ಸೆ ನೀಡುವಲ್ಲಿ ಸೇವೆ ಸಲ್ಲಿಸುತ್ತಿರುವ ಪಂಚವಟಿ ಆರ್ಯುವೇದಿಕ್ ಚಿಕಿತ್ಸೆ ಕೇಂದ್ರದ ಸದುಪಯೋಗವನ್ನು ಜನರು ಮಾಡಿಕೊಳ್ಳಬೇಕಿದೆ ಎಂದು ನಿವೃತ್ತ ತಹಶಿಲ್ದಾರ ಅಮರೇಶಪ್ಪ ಹೂನೂರು ಹೇಳಿದರು.

ಪಟ್ಟಣದ ಹೊರವಲಯದ ಮಿನಿ ವಿಧಾನಸೌಧ ಮುಂಭಾಗದ ಪಂಚವಟಿ ಅರ್ಯುವೇದಿಕ ಚಿಕಿತ್ಸಾ ಕೇಂದ್ರದಲ್ಲಿ ಆಯೋಜಿಸಿದ್ದ ಉಚಿತ ಚಿಕಿತ್ಸಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದ, ಅವರು ಕಡಿಮೆ ವೆಚ್ಚದಲ್ಲಿ ಉತ್ತಮವಾದ ಚಿಕಿತ್ಸೆಯು ಪಂಚವಟಿ ಚಿಕಿತ್ಸಾ ಕೇಂದ್ರ ನೀಡುತ್ತಿರುವುದು ಬಹಳ ಸಹಕಾರಿಯಾಗಿದೆ ಎಂದರು.

ನಂತರ ಮಾತನಾಡಿದ ಡಾ.ಪವಿತ್ರಾ ಹಿರೇಮಠ M D (Ayu) ರವರು ಪಂಚವಟಿ ಚಿಕಿತ್ಸಾ ಕೇಂದ್ರದಲ್ಲಿ ವಾರದ ಪ್ರತಿ ಸೋಮವಾದಂದು ನುರಿತ ವೈದ್ಯರಿಂದ ಜನರ ಹಲವು ರೋಗಗಳಿಗೆ ಉಚಿತ ಚಿಕಿತ್ಸೆ ನೀಡಲಾಗುವುದು ಎಂದರು.

ಈ ಸಂಧರ್ಭದಲ್ಲಿ ನಿವೃತ್ತ ನೌಕರರ ಪತ್ತಿನ ಸಂಘದ ಅಧ್ಯಕ್ಷರಾದ ಶರಣಬಸವರಾಜ ನಾಡಗೌಡ ,ಎಸ್ ಕೆ ಡಿ ಆರ್ ಡಿ ಪಿ ಸಮನ್ವಯಧಿಕಾರಿ ಅನುರಾಧ,ಪಂಚವಟಿ ಕೇಂದ್ರ ದ ಮುಖ್ಯಸ್ಥರಾದ ವೈದ್ಯ ಸಿ.ಕುಮಾರಸ್ವಾಮಿ,ಜಗನ್ನಾಥ ಚಿತ್ತಾಪುರ,ಚಂದ್ರಶೇಖರ ತೆರೊಪಿಸ್ಟ್,ಮಂಜುನಾಥ ಸೇರಿದಂತೆ ಇತರರಿದ್ದರು.

# ಜಿಲ್ಲಾಡಳಿತದಿಂದ ಬ್ರಹ್ಮಶ್ರೀ ನಾರಾಯಣ ಗುರು ಜಯಂತ್ಯುತ್ಸವ



**ಯುವ ಮಾರ್ಗ ಸುದ್ದಿ**

**ರಾಯಚೂರು,ಸೆ.8–**ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಸೆಪ್ಟೆಂಬರ್ 07ರಂದು ರಾಯಚೂರಿನಲ್ಲಿ ಬ್ರಹ್ಮಶ್ರೀ ನಾರಾಯಣ ಗುರು ಜಯಂತ್ಯುತ್ಸವ ಕಾರ್ಯಕ್ರಮಗಳು ನಡೆದವು.

ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಬೋಸರಾಜು, ರಾಯಚೂರು ನಗರ ಕ್ಷೇತ್ರದ ಶಾಸಕರಾದ ಡಾ. ಎಸ್ ಶಿವರಾಜ ಪಾಟೀಲ್, ಕರ್ನಾಟಕ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ವಿಧಾನ ಪರಿಷತ್ ಸದಸ್ಯರಾದ ಎ ವಸಂತಕುಮಾರ, ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ ಅವರು, ಬ್ರಹ್ಮಶ್ರೀ ನಾರಾಯಣ ಗುರು ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಜಯಂತ್ಯುತ್ಸವದ ಮೆರವಣಿಗೆಗೆ ಚಾಲನೆ ನೀಡಿದರು.

ಮೆರವಣಿಗೆಯು ನಗರದ ಎಚ್‌ಎಸ್‌ಅರ್ ಬಡಾವಣೆಯ ಮೂಲಕ ಜೈಲ್ ರಸ್ತೆ, ತಹಶಿಲ್ದಾರ್ ಕಚೇರಿ, ಬಸ್ ನಿಲ್ದಾಣದ ಮುಂಭಾಗದಿಂದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತದ ಮೂಲಕ ಸಾರ್ವಜನಿಕ ಉದ್ಯಾನವನದ ಮಾರ್ಗವಾಗಿ ಪಂಡಿತ್ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದವರೆಗೆ ಸಾಗಿತು.

ಮಹಾನಗರ ಪಾಲಿಕೆಯ ಉಪಾಧ್ಯಕ್ಷ ಸಾಜಿದ್ ಸಮೀರ್, ತಹಸೀಲ್ದಾರ ಸುರೇಶ ವರ್ಮ, ಮುಖಂಡರಾದ ಕೆ ಶಾಂತಪ್ಪ ಕಡಗೋಲ್, ರವಿ ಬೋಸರಾಜ್, ಸಮಾಜದ ಮುಖಂಡರಾದ ನರಸಿಂಹ ಗೌಡ, ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಸಹ ಕಾರ್ಯದರ್ಶಿ ಡಾ.ದಂಡಪ್ಪ ಬಿರಾದಾರ, ಮಹಾನಗರ ಪಾಲಿಕೆಯ ವ್ಯವಸ್ಥಾಪಕ ರಾಜು, ಆರ್ಯ ಈಡಿಗ ಸಮಾಜದ ಮುಖಂಡರಾದ ಬಸವರಾಜ್ ಗೌಡ, ರಾಜನ ಗೌಡ, ಅಶೋಕ್ ಗುತ್ತೇದಾರ್, ಈರಪ್ಪ ಗೌಡ, ಅನಂತರಾಜು ಗೌಡ, ತಾಯನ ಗೌಡ, ಖಾಜನ ಗೌಡ, ರಂಗಲಿಂಗನ ಗೌಡ, ಪರಶುರಾಮ್ ಹಾಗೂ ಸಮುದಾಯದ ಹಿರಿಯರು, ಮಹಿಳೆಯರು, ಯುವಕರು ಮೆರವಣಿಗೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಮೆರವಣಿಗೆಯ ಕಳೆ ಹೆಚ್ಚಿಸಿದರು. ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ವಿನೋದ್ ಮತ್ತು ಇಸ್ಮಾಯಿಲ್ ಅವರು ಕಲಾ ತಂಡಗಳ ನಿರ್ವಹಣೆ ಮಾಡಿದರು.

ಬಳಿಕ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಿತು. ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ ಅವರು ವೇದಿಕೆಯ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.

ಉಡುಪಿಯ ನಿವೃತ್ತ ಉಪನ್ಯಾಸಕ ದಯಾನಂದ.ಡಿ ಅವರು ವಿಶೇಷ ಉಪನ್ಯಾಸ ನೀಡಿ, ಕೇರಳದ ಬಸವಣ್ಣ ಎಂದೇ ಪ್ರಖ್ಯಾತಿ ಹೊಂದಿದ್ದ ನಾರಾಯಣ ಗುರುಗಳು ತಮ್ಮ ಇಡೀ ಜೀವನವನ್ನು ಸಮಾಜ ಸುಧಾರಣೆಗಾಗಿ ಮುಡುಪಾಗಿಟ್ಟಿದ್ದರು. ಕೆಳಜಾತಿಯವರ ಮೇಲೆ ಆಗುತ್ತಿದ್ದ ದೌರ್ಜನ್ಯ, ಹೆಣ್ಣು ಮಕ್ಕಳ ಮೇಲೆ ವಿಧಿಸಿದ್ದ ನಿಬಂಧನೆಗಳನ್ನು ಅಹಿಂಸಾತ್ಮಕವಾಗಿ ವಿರೋಧಿಸಿ ಮಾನವಕುಲ ಒಂದೇ ಎಂಬ ಸಿದ್ಧಾಂತವನ್ನು ಸಮಾಜದಲ್ಲಿ ಸಾರಿದ್ದರು ಎಂದು ತಿಳಿಸಿದರು.

ಅವರವರ ಕೆಲಸ ಕಾರ್ಯಗಳಿಂದ ಜಾತಿ ಸೃಷ್ಟಿಯಾಗಿವೇ ಹೊರತು ಅದಕ್ಕೆ ಯಾವುದೇ ಮೂಲಾಧಾರಗಳಿಲ್ಲ. ಮೇಲ ಜಾತಿಯವರಿಂದ ಕೆಳಜಾತಿಯವರು ಸಾಕಷ್ಟು ದೂರ ಇರುವ ಸ್ಥಿತಿ ಕೇರಳ ರಾಜ್ಯದಲ್ಲಿ ಸಹ ಇತ್ತು. ಮೇಲ್ಜಾತಿಯ ಜನರು ಓಡಾಡುವ ರಸ್ತೆಯಲ್ಲಿ ಕೆಳಜಾತಿಯವರು ಓಡಾಡದಂತಹ ಪರಿಸ್ಥಿತಿ ನಿರ್ಮಾಣವಾಗಿತ್ತು. ದೇವಸ್ಥಾನ, ಕೆರೆ, ಕಾಲುವೆಗಳಲ್ಲಿ ಕೆಳ ಜಾತಿಯ ಜನರಿಗೆ ಅವಕಾಶ ಇರಲಿಲ್ಲ. ಅಲ್ಲಿರುವ ಜಾತಿ ವ್ಯವಸ್ಥೆಯನ್ನು ನೋಡಿ ಆ ಕಾಲದ ಸಮಾಜ ಸುಧಾರಕರು ಬೇಸರ ವ್ಯಕ್ತಪಡಿಸುತ್ತಿದ್ದರು. ಆ ಅವ್ಯವಸ್ಥೆಯನ್ನು ಸರಿಪಡಿಸಲು ಜನ್ಮ ತಾಳಿದವರೇ ನಾರಾಯಣ ಗುರುಗಳಾಗಿದ್ದಾರೆ. ಮೂಢನಂಬಿಕೆ, ಜಾತಿ ಪದ್ಧತಿಯನ್ನು ನಾರಾಯಣ ಗುರುಗಳು ಖಂಡಿಸಿದ್ದರು ಎಂದು ತಿಳಿಸಿದರು.

ಸಮಾರಂಭದಲ್ಲಿ ರಾಯಚೂರು ತಹಸೀಲ್ದಾರ್ ಸುರೇಶ್ ವರ್ಮಾ, ರಾಯಚೂರು ಜಿಲ್ಲಾಧಿಕಾರಿಗಳ ಕಚೇರಿಯ ತಹಸೀಲ್ದಾರ್ ಪರಶುರಾಮ, ಜಿಲ್ಲಾ ಹಿಂದುಳಿದ ವರ್ಗಗಳ ಒಕ್ಕೂಟದ ಅಧ್ಯಕ್ಷ ಕೆ.ಶಾಂತಪ್ಪ, ಮುಖಂಡರಾದ ಎನ್. ಶಂಕ್ರಪ್ಪ, ಹರವಿ ನಾಗನಗೌಡ, ಆಂಜನೇಯ ಕಡಗೋಲ್, ನಾಗಿರಡ್ಡಿ, ಶ್ರೀನಿವಾಸ ರೆಡ್ಡಿ, ಶ್ರೀಕಾಂತ್ ವಕೀಲ್, ಶ್ರೀನಿವಾಸ್, ಬಸವರಾಜ ಪಾಟೀಲ್, ಎಂ.ವಿರುಪಾಕ್ಷಿ, ಖಾಜನಗೌಡ, ಚನ್ನಪ ನಾಗೋಲಿ, ಪರಶುರಾಮ, ನರಸನಗೌಡ, ಲಚ್ಚನಗೌಡ, ರಾಚನಗೌಡ, ಅಶೋಕಗೌಡ, ಈರಪ್ಪಗೌಡ, ಹನುಮಂತಪ್ಪಗೌಡ, ರಂಗಲಿಂಗನಗೌಡ, ತಾಯನಗೌಡ, ಬಸವರಾಜಗೌಡ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

# ಪತ್ರಕರ್ತರ ಕುಟುಂಬದ ಉಚಿತ ಆರೋಗ್ಯ ತಪಾಸಣೆ : ಡಾ:ರುದ್ರಗೌಡ ಪಾಟೀಲ್



**ಯುವ ಮಾರ್ಗ ಸುದ್ದಿ**

**ಲಿಂಗಸುಗೂರು,ಸೆ.8–** ಸಮಾಜದ ಕಾಳಜಿಗೆ ಮಿಡಿಯುವ ಪತ್ರಕರ್ತರ ಸಮೂಹ ಮತ್ತು ಅವರ ಕುಟುಂಬ ವರ್ಗದ ಉಚಿತ ಆರೋಗ್ಯ ತಲಾಸಣೆ ಮತ್ತು ಔಷಧ ವಿತರಣೆ ಶಿಬಿರವನ್ನು ನಾಳೆ ಸೆ.09ಕ್ಕೆ ಪಟ್ಟಣದ ಪತ್ರಿಕಾ ಭವನದಲ್ಲಿ ಆಯೋಜಿಸಲಾಗಿದೆ ಎಂದು ಸರಕಾರಿ ಆಸ್ಪತ್ರೆ ಮುಖ್ಯ ವೈದ್ಯಾಧಿಕಾರಿ ಡಾ.ರುದ್ರಗೌಡ ಪೋಲಿಸ್ ಪಾಟೀಲ್ ತಿಳಿಸಿದ್ದಾರೆ.

ಭಾನುವಾರ ಪ್ರಕಟಣೆ ನೀಡಿರುವ ಅವರು, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘವು ನಾಡಿನಲ್ಲಿ ಸರಕಾರ ಮತ್ತು ಜನರ ಮಧ್ಯದ ಕೊಂಡಿಯಾಗಿ ಶ್ಲಾಘನೀಯ ಸೇವೆ ಸಲ್ಲಿಸುತ್ತಿದೆ. ಆದರೆ, ಪತ್ರಕರ್ತರು ಇತರರ ಬಗ್ಗೆ ಕಾಳಜಿ ತೋರುವಷ್ಟು ತಾವು ಮತ್ತು ಕುಟುಂಬಕ್ಕೆ ಹೆಚ್ಚಿನ ಸಮಯ ನೀಡುವುದಿಲ್ಲ. ಆರೋಗ್ಯ ಸಮಸ್ಯೆಯಾದರೆ ಅವರಿಗೂ ಪರದಾಟ ತಪ್ಪಿದ್ದಲ್ಲ. ಇದನ್ನು ಮನಗಂಡು ಆರೋಗ್ಯ ಇಲಾಖೆ ವತಿಯಿಂದ ಉಚಿತ ಆರೋಗ್ಯ ಶಿಬಿರ ಆಯೋಜನೆ ಮಾಡಲಾಗಿದೆ. ಶಿಬಿರದಲ್ಲಿ ಹೃದಯ, ಕಣ್ಣು, ಎಲುವು 'ಮತ್ತು ಕೀಲು ಸೇರಿ ತಜ್ಞ ವೈದ್ಯರಿಂದ ತಪಾಸಣೆ ನಡೆಯಲಿದೆ. ತಾಲೂಕಿನ ಪತ್ರಕರ್ತರು ಈ ಶಿಬಿರದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು.

**ಕಾರ್ಡ್ ಕಡ್ಡಾಯ** :ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಸದಸ್ಯರಿಗೆ ಈ ಶಿಬಿರನ್ನು ಆಯೋಜನೆ ಮಾಡಲಾಗಿದ್ದು, ಕಡ್ಡಾಯವಾಗಿ ಸದಸ್ಯರು ಸಂಘದಿಂದ ನೀಡಿದ ಕಾರ್ಡನ್ನು ಆರೋಗ್ಯ ತಪಾಸಣೆ ವೇಳೆ ತರಬೇಕು ಎಂದು ಸಂಘದ ಅಧ್ಯಕ್ಷ ಗುರುರಾಜ ಗೌಡೂರು, ಪ್ರಧಾನ ಕಾರ್ಯದರ್ಶಿ ಅಮರಯ್ಯ ಘಂಟಿ ತಿಳಿಸಿದ್ದಾರೆ.

# ಲೊಯೋಲ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ರಸ್ತೆ ಅಪಘಾತದಲ್ಲಿ ಮೃತ ಮಕ್ಕಳಿಗಾಗಿ ವಿಶೇಷ ಪ್ರಾರ್ಥನೆ



**ಯುವ ಮಾರ್ಗ ಸುದ್ದಿ**

**ಮಾನ್ವಿ,ಸೆ.8–**ಪಟ್ಟಣದ ಲೊಯೋಲ ಶಿಕ್ಷಣ ಸಂಸ್ಥೆಯ ಆವರಣದಲ್ಲಿ ಶಾಲೆಯಲ್ಲಿ ಅಭ್ಯಾಸ ಮಾಡುತ್ತಿದ್ದ ವಿದ್ಯಾರ್ಥಿಗಳಾದ ಸಮರ್ಥ ಮತ್ತು ಶ್ರೀಕಾಂತ್ ಶಾಲಾ ವಾಹನ ಹಾಗೂ ಬಸ್ ನಡುವೆ ಸಂಭವಿಸಿದ ರಸ್ತೆ ಅಪಘಾತದಲ್ಲಿ ಮೃತಪಟ್ಟು ಒಂದು ವರ್ಷ ಕಳೆದಿರುವುದರ ಅಂಗವಾಗಿ ಮೃತ ವಿದ್ಯಾರ್ಥಿಗಳ ಆತ್ಮಕ್ಕೆ ಶಾಂತಿ ನೀಡುವ ಸಲುವಾಗಿ ಅಯೋಜಿಸಲಾದ ಪ್ರಾರ್ಥನಾ ಕೂಟದಲ್ಲಿ ಲೊಯೋಲ ಸಂಸ್ಥೆಯ ಮುಖ್ಯಸ್ಥರಾದ ಫಾ.ಸಿಪ್ರಿಯನ್ ಟೆಲ್ಲಿಸ್ ರವರು ವಿಶೇಷವಾಗಿ ಪ್ರಾರ್ಥಿಸಿ ಮಾತನಾಡಿ ವಿದ್ಯಾರ್ಥಿಗಳ ಆತ್ಮಕ್ಕೆ ಶಾಂತಿ ದೊರಕಲಿ ಹಾಗೆಯೇ ವಿದ್ಯಾರ್ಥಿಗಳ ಕುಟುಂಬಕ್ಕೆ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಭಗವಂತ ನೀಡಲಿ ಎಂದು ತಿಳಿಸಿದರು.ಪ್ರಾರ್ಥನಾ ಕೂಟದಲ್ಲಿ ಲೊಯೋಲ ಶಾಲೆಯ ನಿರ್ದೇಶಕರಾದ ಫಾ. ಸಿರಿಲ್‌ರಾಜ್, ಫಾ. ವಿನೋದ್ ಪೌಲ್, ಫಾ. ಪ್ರವೀಣ್ ಕುಮಾರ್, ಫಾ. ವಿಲ್ಸನ್ ಬೆನ್ನಿಸ್, ಫಾ. ಅವಿನಾಶ್, ಫಾ.ಜಾರ್ಜ್, ಸಿಸ್ಟರ್ ಜೂಲಿಯೇಟ್ ಸೇರಿದಂತೆ ಶಿಕ್ಷಣ ಸಂಸ್ಥೆಯಲ್ಲಿನ ಉಪನ್ಯಾಸಕರು,ಶಿಕ್ಷಕರು, ಸಿಬ್ಬಂದಿಗಳು ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ದಸರಾ ಕ್ರೀಡಾಕೂಟ: ಆನ್‌ಲೈನ್ ನೋಂದಣಿಗೆ ಸೆ.9 ಕೊನೆಯ ದಿನ

**ರಾಯಚೂರು,ಸೆ.8–** ಪ್ರಸಕ್ತ 2025–26ನೇ ಸಾಲಿನ ಕಲಬುರಗಿ ವಿಭಾಗ ಮಟ್ಟದ ದಸರಾ ಕ್ರೀಡಾಕೂಟವು ವಿವಿಧ ಜಿಲ್ಲೆಗಳಲ್ಲಿ ಸೆಪ್ಟೆಂಬರ್ 10ರೊಳಗೆ ನಡೆಯಲಿದೆ.

ರಾಯಚೂರು ಜಿಲ್ಲಾಮಟ್ಟದ ದಸರಾ ಕ್ರೀಡಾಕೂಟದಲ್ಲಿ ವೈಯಕ್ತಿಕ ಸ್ಪರ್ಧೆಗಳಲ್ಲಿ ಪ್ರಥಮ ಮತ್ತು ದ್ವಿತೀಯ ಸ್ಥಾನ ಪಡೆದವರು ಹಾಗೂ ಗುಂಪು ಸ್ಪರ್ಧೆಗಳಲ್ಲಿ ಪ್ರಥಮ ಸ್ಥಾನ ಪಡೆದವರು ಈ ವಿಭಾಗ ಮಟ್ಟದ ದಸರಾ ಕ್ರೀಡಾಕೂಟದಲ್ಲಿ ಭಾಗವಹಿಸಲು ಅರ್ಹರಿದ್ದು ಕಡ್ಡಾಯವಾಗಿ ಇಲಾಖೆಯ ಆನ್‌ಲೈನ್ ಲಿಂಕ್‌ನಲ್ಲಿ ನೋಂದಣೆ ಮಾಡಬೇಕು.

ಇದುವರೆಗೆ ನೋಂದಣಿ ಆಗದೇ ಇರುವ ಕ್ರೀಡಾಪಟುಗಳಿಗೆ ವಿಭಾಗ ಮಟ್ಟದಲ್ಲಿ ಭಾಗವಹಿಸಲು ಅವಕಾಶವಿರುವುದಿಲ್ಲ. ರಾಯಚೂರು ಜಿಲ್ಲೆಯಲ್ಲಿ ವಿಜೇತರಾದ ಕ್ರೀಡಾಪಟುಗಳು ಸೆ.09ರೊಳಗಾಗಿ ಕಡ್ಡಾಯವಾಗಿ ಆನ್‌ಲೈನ್ ಲಿಂಕ್‌ನಲ್ಲಿ ನೋಂದಣಿ ಮಾಡಬೇಕು. ಆನ್‌ಲೈನದಲ್ಲಿ ಅರ್ಜಿ ಹಾಕಿದ ಬಗ್ಗೆ ಪ್ರತಿಯನ್ನು ಕ್ರೀಡಾಕೂಟ ಸಂಘಟಕರಿಗೆ ಕ್ರೀಡಾಕೂಟದಿನದಂದು ಮುಂಚಿತವಾಗಿ ಸಲ್ಲಿಸಿ ವರದಿ ಮಾಡಿ ಹೆಸರು ನೋಂದಾಯಿಸಬೇಕು. ಹೆಚ್ಚಿನ ವಿವರಗಳಿಗಾಗಿ ಮಹಾತ್ಮಾ ಗಾಂಧಿ ಕ್ರೀಡಾಂಗಣದಲ್ಲಿ ಇರುವ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಕಚೇರಿ ಅಥವಾ ಮೊಬೈಲ್ ಸಂಖ್ಯೆ: 7338647270ಗೆ ಸಂಪರ್ಕಿಸಬಹುದಾಗಿದೆ.

ಯಾವ ಜಿಲ್ಲೆಯಲ್ಲಿ ಯಾವ ಕ್ರೀಡೆ: ಕಲಬುರಗಿ ವಿಭಾಗದ ಬೇರೆ ಬೇರೆ ಜಿಲ್ಲೆಗಳಲ್ಲಿ ಬೇರೆ ಬೇರೆ ಕ್ರೀಡೆಗಳನ್ನ ಆಯೋಜನೆ ಮಾಡಲಾಗುತ್ತಿದೆ. ಕಲಬುರಗಿ ಜಿಲ್ಲೆಯಲ್ಲಿ ಬಾಸ್ಕೆಟ್‌ಬಾಲ್, ಹ್ಯಾಂಡ್‌ಬಾಲ್, ಅಥ್ಲೆಟಿಕ್ಸ್, ಸ್ವಿಮ್ಮಿಂಗ್, ಜೂಡೋ, ಫುಟ್‌ಬಾಲ್ ಹಾಗೂ ಟೆನ್ನಿಸ್ ಕ್ರಿಡೆಗಳನ್ನು ನಡೆಸಲಾಗುತ್ತದೆ. ಕೊಪ್ಪಳ ಜಿಲ್ಲೆಯಲ್ಲಿ ಟೆಕ್ವಾಂಡೋ, ನೆಟ್‌ಬಾಲ್ ಹಾಗೂ ಕುಸ್ತಿ ಕ್ರೀಡೆಗಳನ್ನು, ಬಳ್ಳಾರಿ ಜಿಲ್ಲೆಯಲ್ಲಿ ಹಾಕಿ, ವುಷು, ಕಬಡ್ಡಿ ಹಾಗೂ ಬಾಕ್ಸಿಂಗ್ ಕ್ರೀಡೆಗಳನ್ನು, ರಾಯಚೂರು ಜಿಲ್ಲೆಯಲ್ಲಿ ಬಾಲ್ ಬ್ಯಾಡ್ಮಿಂಟನ್, ಬ್ಯಾಡ್ಮಿಂಟನ್ ಹಾಗೂ ಟೇಬಲ್ ಟೆನ್ನಿಸ್ ಕ್ರೀಡೆಗಳನ್ನು ಹಾಗೂ ಬೀದರ್ ಜಿಲ್ಲೆಯಲ್ಲಿ ವಾಲಿಬಾಲ್ ಹಾಗೂ ಯೋಗ ಕ್ರೀಡೆಗಳನ್ನು ಮತ್ತು ಯಾದಗಿರಿ ಜಿಲ್ಲೆಯಲ್ಲಿ ವೇಟ್ ಲಿಫ್ಟಿಂಗ್, ಖೋ–ಖೋ ಹಾಗೂ ಥ್ರೋ–ಬಾಲ್ ಕ್ರೀಡೆಗಳನ್ನು ನಡೆಸಲಾಗುತ್ತದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಅಧಿಕಾರಿ ವೀರೇಶ ನಾಯಕ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಯಚೂರು ಮಹಾನಗರ ಪಾಲಿಕೆಯಿಂದ ಕಲ್ಯಾಣ ಕಾರ್ಯಕ್ರಮಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನ

**ರಾಯಚೂರು.ಸೆ.8–**ಇಲ್ಲಿನ ರಾಯಚೂರು ಮಹಾನಗರ ಪಾಲಿಕೆಯಿಂದ 2019–20, 2022–23ನೇ ಹಾಗೂ 2023–24, 2024–25ನೇ ಸಾಲಿನ ಎಸ್.ಎಫ್.ಸಿ ನಿಧಿ & ನಗರಸಭೆ ನಿಧಿಯ ಶೇ.29ರ ಪರಿಷ್ಕೃತ ಕ್ರಿಯಾ ಯೋಜನೆಯಡಿ ಎಸ್.ಸಿ.ಎಸ್.ಪಿ ಹಾಗೂ ಟಿ.ಎಸ್.ಪಿ ಕಲ್ಯಾಣ ಕಾರ್ಯಕ್ರಮಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.2019–20, 2023–24ನೇ ಸಾಲಿನ ಶೇ.29 ರ ಎಸ್.ಎಫ್.ಸಿ ಮುಕ್ತ ನಿಧಿ ಪರಿಷ್ಕೃತ ಕ್ರಿಯಾ ಯೋಜನೆಯಡಿ ಎಸ್.ಸಿ.ಎಸ್.ಪಿ ರಡಿ ಶೇ.40 ವೈಯಕ್ತಿಕ ಸೌಲಭ್ಯಗಳಿಗಾಗಿ ಕಾರ್ಯಕ್ರಮದಡಿ ವೈಯಕ್ತಿಕ ಹರಿಯುವ ನೀರು ಶೌಚಾಲಯ ಹೊಂದಿರದ ಪರಿಶಿಷ್ಟ ಜಾತಿ ಕುಟುಂಬಗಳಿಗೆ ಸೇರಿದ ಪ್ರತಿ ಕುಟುಂಬಕ್ಕೆ ಸ್ವಂತ ಸೆಪ್ಟಿಕ್ ಟ್ಯಾಂಕ್ ಶೌಚಾಲಯ ನಿರ್ಮಾಣಕ್ಕೆ ಗರಿಷ್ಟ 15,000 ರೂ.ಗಳಿಗೆ ಮಿತಿಗೊಳಿಸಲಾಗಿದೆ. ಮತ್ತು ಯುಜಿಡಿ ಸಂಪರ್ಕ ಹೊಂದುವ ಶೌಚಾಲಯ ನಿರ್ಮಾಣಕ್ಕೆ ಗರಿಷ್ಟ 10,000 ರೂ.ಗಳಿಗೆ ನಿಗದಿಪಡಿಸಲಾಗಿದೆ.ದಾಖಲಾತಿಗಳು: ಸೌಲಭ್ಯಕ್ಕಾಗಿ ನಿಗಧಿತ ನಮೂನೆಯಲ್ಲಿ ಅರ್ಜಿ, ದೃಢೀಕೃತ ಜಾತಿ ಮತ್ತು ಅದಾಯ ಪ್ರಮಾಣ ಪತ್ರ, ದೃಢೀಕೃತ ವಾಸಸ್ಥಳಕ್ಕೆ ಗುರುತಿನ ಚೀಟಿ/ರೇಷನ್ ಕಾರ್ಡ, ಪಾಸ್ ಪೋಟೋ ಅಳತೆಯ ಭಾವ ಚಿತ್ರ–2, ಬ್ಯಾಂಕ್ ಪಾಸ್ ಪುಸ್ತಕ್ ಹಾಗು ಐ.ಎಫ್.ಎಸ್.ಸಿ ಕೋಡ್‌ನೊಂದಿಗೆ ಬ್ಯಾಂಕ್ ವಿವರ, ವೈಯಕ್ತಿಕ ಶೌಚಾಲಯ ನಿರ್ಮಾಣಕ್ಕೆ ಜಾಗದ ಛಾಯಾಚಿತ್ರ ಹಾಗೂ ಮೋಬೈಲ್ ನಂಬರ್‌ನೊಂದಿಗೆ ಸೆಪ್ಟೆಂಬರ್ 22ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಅವಧಿ ಮೀರಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಸರಿಯಾದ ದಾಖಲಾತಿಗಳು ಸಲ್ಲಿಸದೇ ಇದ್ದ ಪಕ್ಷದಲ್ಲಿ ತಮಗೆ ಯಾವುದೇ ಹಿಂಬರಹ ಕಳುಹಿಸದೇ ನೇರವಾಗಿ ವಿಭಾಗದ ಸಿಬ್ಬಂದಿಯವರು ತಿರಸ್ಕೃತ ಮಾಡಲಾಗುವುದು ಎಂದು ರಾಯಚೂರು ಮಹಾನಗರ ಪಾಲಿಕೆಯ ಆಯುಕ್ತರಾದ ಜುಬಿನ್ ಮೊಹಾಪಾತ್ರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ್ರಜಾಪ್ರಭುತ್ವ ದಿನದ ನಿಮಿತ್ತ ಜಿಲ್ಲಾಮಟ್ಟದಲ್ಲಿ ವಿವಿಧ ಸ್ಪರ್ಧೆಗಳು

**ರಾಯಚೂರು,ಸೆ.8–**ಸೆಪ್ಟೆಂಬರ್ 15 ರಂದು, ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಪ್ರಯುಕ್ತ ಮತದಾನದ ಮೂಲಕ ಪ್ರಜಾಪ್ರಭುತ್ವದ ಮಹತ್ವ ಕುರಿತು ಜಿಲ್ಲಾ ಮಟ್ಟದಲ್ಲಿ ಚರ್ಚಾ ಸ್ಪರ್ಧೆ, ಚಿತ್ರಕಲಾ ಸ್ಪರ್ಧೆ ಮತ್ತು ಛಾಯಾಗ್ರಹಣ ಸ್ಪರ್ಧೆಗಳನ್ನು ಹಮ್ಮಿಕೊಳ್ಳಲಾಗಿದೆ.

ಜಿಲ್ಲಾಮಟ್ಟದಲ್ಲಿ ವಿಜೇತರಾದ 3 ಸ್ಪರ್ಧಾರ್ಥಿಗಳಿಗೆ ಬೆಂಗಳೂರಿನಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳ ಘನ ಉಪಸ್ಥಿತಿಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಪ್ರಶಸ್ತಿ ನೀಡಲಾಗುವುದು. ಈ ಸ್ಪರ್ಧೆಯು ಸಾರ್ವಜನಿಕರಿಗೆ ಮುಕ್ತವಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಪ್ರಜಾಪ್ರಭುತ್ವ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಲು ಕೋರಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಸಿಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

Owned, Printed and published by ANILKUMAR H from Plot No. # 3-5-415/-A MANVI Pooja Rice Mill, Near Kataraki Road, Manvi Tq. Manvi, Dist, Raichur-584123, Printed at MAA FRIENDS PRINTING PRESS, Plot No. # 3-5-415/-A Pooja Rice Mill Near Kataraki Road, Manvi Tq. Manvi, Dist: Raichur-584123, State: Karnataka Editor: ANILKUMAR H